# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ
EDITOR: MAHESHWARI BHIMASHI BHARAMANNAVARA

BELAGAVI VARTE
KANNADA DAILY MORNING BELAGAVI

G-mail: belagavivarte1@gmail.com
epaper. belagavivarte.com
Regd No : G2/PMG/KA/NK/BM/157/26-28

Volume: 01 | Issue : 73 | TUESDAY 26-05-2026 | PRGI No : KNKAN/26/A0962 | Pages:4 | Rs.2.00 | M: 9742418836


## “ಇಂದು ದೆಹಲಿಗೆ ಬರುವಂತೆ ಹೈಕಮಾಂಡ್ ನಿಂದ ಬುಲಾವ್ ಬಂದಿದೆ, ಹೋಗುತ್ತಿದ್ದೇನೆ”: ನಾಯಕತ್ವ ಬದಲಾವಣೆ ಚರ್ಚೆಗಳ ನಡುವೆ CM ಸಿದ್ದರಾಮಯ್ಯ ಹೇಳಿಕೆ



ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು (ಮೇ 26ರಂದು) ನಡೆಯುವ ಸಭೆಗೆ ಕಾಂಗ್ರೆಸ್ ಹೈಕಮಾಂಡ್ ತಮ್ಮನ್ನು ದೆಹಲಿಗೆ ಆಹ್ವಾನಿಸಿದೆ ಎಂದು ತಿಳಿಸಿದ್ದಾರೆ. ಆದರೆ ಸಭೆಯ ಅಜೆಂಡಾ ಏನು ಎಂಬುದು ತಮಗೆ ತಿಳಿದಿಲ್ಲ ಎಂದು ಹೇಳಿದ್ದಾರೆ.

ನನ್ನನ್ನು ದೆಹಲಿಗೆ ಆಹ್ವಾನಿಸಿದ್ದಾರೆ. ಇಂದು ಬೆಳಗ್ಗೆ 11 ಗಂಟೆಗೆ ದೆಹಲಿಯಲ್ಲಿ ಸಭೆ ಇದೆ. ವಿಷಯ ಏನು ಎಂಬುದು ನನಗೆ ಗೊತ್ತಿಲ್ಲ. ಆದರೆ ಆಹ್ವಾನ ಬಂದಿದೆ. ನಿನ್ನೆ ರಾತ್ರಿ ಕೆ ಸಿ ವೇಣುಗೋಪಾಲ್ ಅವರು ಕರೆ ಮಾಡಿ ದಿನಾಂಕ ಹಾಗೂ ಸಭೆಯ ಬಗ್ಗೆ ಮಾಹಿತಿ ನೀಡಿದರು ಎಂದು ಸಿಎಂ ಸಿದ್ದರಾಮಯ್ಯ ಸುದ್ದಿಗಾರರಿಗೆ ತಿಳಿಸಿದರು.

ಮೇ 20ರಂದು ಸರ್ಕಾರ ಮೂರು ವರ್ಷ ಪೂರೈಸಿದ ಹಿನ್ನೆಲೆಯಲ್ಲಿ, ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಹಾಗೂ ಸಚಿವ ಸಂಪುಟ ಪುನಾರಚನೆ ಕುರಿತು ಊಹಾಪೋಹಗಳು ಜೋರಾಗಿವೆ.

ಇದರ ಮಧ್ಯೆ, ಉಪ ಮುಖ್ಯಮಂತ್ರಿ ಡಿ ಕೆ ಸುದ್ದಿಗಾರರೊಂದಿಗೆ ಮಾತನಾಡಿ, ನನ್ನನ್ನು ಹೈಕಮಾಂಡ್ ದೆಹಲಿಗೆ ಕರೆದರೆ ನಾನು ಹೋಗುತ್ತೇನೆ ಎಂದರು.

2023ರ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಗೆಲುವು ಸಾಧಿಸಿದ ವೇಳೆ ಸಿದ್ದರಾಮಯ್ಯ ಮತ್ತು ಡಿಕೆ ಶಿವಕುಮಾರ್ ನಡುವೆ ಅಧಿಕಾರ ಹಂಚಿಕೆ ಕುರಿತ ಒಪ್ಪಂದವಾಗಿತ್ತು ಎಂಬ ವರದಿಗಳ ಹಿನ್ನೆಲೆಯಲ್ಲಿ, ಡಿ ಕೆ ಶಿವಕುಮಾರ್ ಬೆಂಬಲಿಗರು ಅವರಿಗೆ ಮುಖ್ಯಮಂತ್ರಿ ಸ್ಥಾನ ನೀಡಬೇಕೆಂದು ಒತ್ತಾಯಿಸುತ್ತಿದ್ದಾರೆ.

ಇನ್ನೊಂದೆಡೆ, ಸಿದ್ದರಾಮಯ್ಯ ಅವರು ತಾವು ಪೂರ್ಣ ಐದು ವರ್ಷದ ಅವಧಿಯನ್ನು ಪೂರ್ಣಗೊಳಿಸುವುದಾಗಿ ಈಗಾಗಲೇ ಹೇಳಿದ್ದಾರೆ. ಜೊತೆಗೆ, ಹೈಕಮಾಂಡ್ ನಿರ್ಧಾರವನ್ನು ಪಾಲಿಸುವುದಾಗಿ ಮತ್ತು ಪಕ್ಷ ಕರೆದರೆ ದೆಹಲಿಗೆ ತೆರಳಿ ಚರ್ಚೆ ನಡೆಸುವುದಾಗಿ ತಿಳಿಸಿದ್ದಾರೆ.

ಡಿ ಕೆ ಶಿವಕುಮಾರ್ ಕೂಡ ಕಾಂಗ್ರೆಸ್ ನಾಯಕತ್ವದ ನಿರ್ಧಾರವನ್ನು ಗೌರವಿಸುವುದಾಗಿ ನಿರಂತರವಾಗಿ ಹೇಳುತ್ತಿದ್ದು, ಮುಖ್ಯಮಂತ್ರಿ ಬದಲಾವಣೆಯ ಕುರಿತು ಸಮಯವೇ ಉತ್ತರ ನೀಡಲಿದೆ ಎಂದು ಹೇಳಿದ್ದಾರೆ.

ಪಕ್ಷದ ಮೂಲಗಳ ಪ್ರಕಾರ, ಸಿದ್ದರಾಮಯ್ಯ ಅವರು ಸಚಿವ ಸಂಪುಟ ಪುನಾರಚನೆಗೆ ಒಲವು ತೋರಿದ್ದರೆ, ಡಿ ಕೆ ಶಿವಕುಮಾರ್ ಮೊದಲು ನಾಯಕತ್ವ ಬದಲಾವಣೆ ಕುರಿತು ಪಕ್ಷ ಸ್ಪಷ್ಟ ನಿರ್ಧಾರ ಕೈಗೊಳ್ಳಬೇಕು ಎಂದು ಬಯಸುತ್ತಿದ್ದಾರೆ.

## “ಇಂದೇ ಬರೆದಿಟ್ಕೊಳ್ಳಿ, 2028ಕ್ಕೆ ಇದೇ ಡಿಕೆ ಶಿವಕುಮಾರ್, ಇದೇ ಸರ್ಕಾರ”: ಪವರ್ ಶೇರಿಂಗ್ ನಡುವೆಯೇ DCM ಬಿಗ್ ಸಂದೇಶ



ಬೆಂಗಳೂರು: ರಾಜ್ಯ ಕಾಂಗ್ರೆಸ್ ನಲ್ಲಿ ನಾಯಕತ್ವ ಬದಲಾವಣೆ ಮತ್ತೆ ಸದ್ದು ಮಾಡುತ್ತಿದ್ದು, ಅಧಿಕಾರ ಹಂಚಿಕೆ ಗೊಂದಲದ ನಡುವೆಯೇ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಸೋಮವಾರ ಪ್ರತಿಪಕ್ಷಗಳಿಗೆ ದೊಡ್ಡ ಸಂದೇಶ ನೀಡಿದ್ದಾರೆ.

ಇಂದು ಕೆಪಿಸಿಸಿ ಕಚೇರಿಯಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತಾಡಿದ ಡಿಸಿಎಂ ಡಿಕೆ ಶಿವಕುಮಾರ್ ಅವರು, ಇಂದೇ ಪೇಪರ್‌ನಲ್ಲಿ ಬರೆದಿಟ್ಕೊಳ್ಳಿ ಮುಂದೇನು ನಮ್ದೇ ಸರ್ಕಾರ. 'ಇದೇ ಡಿಕೆ ಶಿವಕುಮಾರ್, ಇದೇ ಕಾಂಗ್ರೆಸ್ ಸರ್ಕಾರ' ಇರುತ್ತದೆ ಎಂದು ಹೇಳಿದರು.

''ಪೇಪರ್‌ನಲ್ಲಿ ಬರೆದಿಟ್ಕೊಳ್ಳಿ, ಈ ಹಿಂದೆ ನಾನು 136 ಸ್ಥಾನ ಬರುತ್ತದೆ ಅಂತ ಹೇಳಿದ್ದೆ, ಈಗಲೂ ಬರೆದಿಟ್ಕೊಳ್ಳಿ, 2028ಕ್ಕೆ ಇದೇ ಡಿಕೆ ಶಿವಕುಮಾರ್, ಇದೇ ಕಾಂಗ್ರೆಸ್ ಸರ್ಕಾರ ಇರುತ್ತದೆ. 2028ರ ಮುಂಬರುವ ಚುನಾವಣೆಯಲ್ಲೂ ಕಾಂಗ್ರೆಸ್ ಸರ್ಕಾರವೇ ಅಧಿಕಾರಕ್ಕೆ ಬರಲಿದೆ” ಎಂದು ಡಿಕೆ ಶಿವಕುಮಾರ್ ವಿಶ್ವಾಸ ವ್ಯಕ್ತಪಡಿಸಿದರು.

2023ರಲ್ಲಿ ಬಿಜೆಪಿ ನಾಯಕ, ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ರಾಜ್ಯದಲ್ಲಿ ಬಿಜೆಪಿಗೆ 122 ಸೀಟು ಬರುತ್ತೆ ಎಂದಿದ್ರು. ಇದೇ ಸಂದರ್ಭದಲ್ಲಿ ಡಿಕೆ ಶಿವಕುಮಾರ್ ಅವರು, ಬರೆದಿಟ್ಟುಕೊಳ್ಳಿ 136 ಸೀಟುಗಳ ಮೂಲಕ ಕಾಂಗ್ರೆಸ್ ಅಧಿಕಾರಕ್ಕೆ ಬರುತ್ತೆ ಎಂದಿದ್ದರು. ಈ ಭವಿಷ್ಯ ನಿಜವಾಗಿತ್ತು. ಇದೀಗ ಮತ್ತೊಂದು ಭವಿಷ್ಯ ನುಡಿದಿರುವ ಡಿಕೆಶಿ, 2028ರ ವಿಧಾನಸಭಾ ಚುನಾವನೆಯಲ್ಲಿ ಮತ್ತೆ ಕಾಂಗ್ರೆಸ್ ಅಧಿಕಾರಕ್ಕೆ ಬರುತ್ತದೆ ಎಂದಿದ್ದಾರೆ.

ಆದಾಗ್ಯೂ, ಸಿಎಂ ಆಗುವ ಕುರಿತ ಪ್ರಶ್ನೆಗೆ ಉತ್ತರಿಸದೆ ಮೌನವಾದ ಡಿಸಿಎಂ, ಇನ್ನು, ದೇಶದಲ್ಲಿನ ದರ ಏರಿಕೆ ಕುರಿತು ಉಲ್ಲೇಖಿಸಿ ಕೇಂದ್ರದ ವಿರುದ್ಧ ವಾಗ್ದಾಳಿ ನಡೆಸಿದರು. ಮೇ.30ಕ್ಕೆ ಪ್ರತಿಭಟನೆ ನಡೆಸ್ತೀವಿ ಎಂದರು.

ಇದೇ ಸಂದರ್ಭದಲ್ಲಿ ದೆಹಲಿಗೆ ಹೋಗುತ್ತಿದ್ದೀರಾ? ಎಂಬ ಪ್ರಶ್ನೆಗೆ, ಹೈಕಮಾಂಡ್ ನಾಯಕರು ಕರೆದರೆ ಮಾತ್ರ ಹೋಗುತ್ತೇನೆ ಎಂದು ಡಿಸಿಎಂ ಉತ್ತರಿಸಿದರು.

## ಏಸುಕ್ರಿಸ್ತನ ತತ್ವಾದರ್ಶಗಳು ಇಂದಿಗೂ ಪ್ರಸ್ತುತ– ಶಾಸಕ ಬಾಲಚಂದ್ರ ಜಾರಕಿಹೊಳಿ




**ಬೆಳಗಾವಿ ವಾರ್ತೆ ಮೂಡಲಗಿ:** ಜಗತ್ತಿಗೆ ಶಾಂತಿ ಸಂದೇಶ ಸಾರಿದ ಏಸುಕ್ರಿಸ್ತನ ತತ್ವ, ಆದರ್ಶಗಳು ಇಂದಿಗೂ ಪ್ರಸ್ತುತವಾಗಿವೆ ಎಂದು ಶಾಸಕ, ಬೆಮುಲ್ ಅಧ್ಯಕ್ಷ ಬಾಲಚಂದ್ರ ಜಾರಕಿಹೊಳಿಯವರು ಹೇಳಿದರು.

ಇಲ್ಲಿನ ಮರೆಪ್ಪಗೋಳ ತೋಟದಲ್ಲಿ ಶನಿವಾರ ಮೆಥೋಡಿಸ್ಟ್ ಚರ್ಚ್ ಹಮ್ಮಿಕೊಂಡ ಸ್ವಸ್ಥತೆಯ ಮಹೋತ್ಸವ ಕೂಟಗಳನ್ನು ಉದ್ಘಾಟಿಸಿ ಮಾತನಾಡಿದರು.

ನೆಮ್ಮದಿ, ಸಮಾಧಾನ, ಶಾಂತಿಯ ಬಗ್ಗೆ ಸಂದೇಶ ಹೇಳಿರುವ ಏಸುಕ್ರಿಸ್ತನು ಎಲ್ಲರನ್ನೂ ಪ್ರೀತಿಸಬೇಕು. ನಮ್ಮ ವೈರಿಗಳೂ ಸಹ ತಪ್ಪು ಮಾಡಿದ್ದರೆ, ಅಂತಹ ತಪ್ಪುಗಳನ್ನು ಮರೆತು ಒಂದಾಗಿ ಪ್ರೀತಿಸಲು ಹೇಳಿದ್ದಾರೆ. ಕ್ಷಮಾಪಣೆ ಗುಣಗಳನ್ನು ಬೆಳೆಸಿಕೊಳ್ಳುವಂತೆಯೂ ಸಂದೇಶದಲ್ಲಿ ತಿಳಿಸಿದ್ದಾರೆ. ಕರುಣಾಮಯಿ, ದಯಾ ರಕ್ಷಕನಾಗಿರುವ ಏಸುಕ್ರಿಸ್ತನ ಆದರ್ಶಗಳು ಎಂದೆಂದಿಗೂ ಪ್ರಸ್ತುತವಾಗಿವೆ ಎಂದು ಹೇಳಿದರು.

ಕೂಟಗಳನ್ನು ಏರ್ಪಾಡು ಮಾಡುವುದರಿಂದ ಕಷ್ಟಗಳು ಪರಿಹಾರವಾಗುತ್ತವೆ. ರೋಗ, ಋಜೀನುವಾಗುತ್ತವೆ. ನಂಬಿಕೊಂಡು ಬರುವವರೆಗೆ ಒಳ್ಳೆಯದು ಆಗುತ್ತದೆ. ಯಾರ ಮುಂದೆಯೂ ಹೇಳಿಕೊಳ್ಳದ ಅನೇಕ ಕಷ್ಟಗಳು, ಸಮಸ್ಯೆಗಳು ಈ ಕೂಟಗಳಲ್ಲಿ ಮಾಡುವ ಏಸುಕ್ರಿಸ್ತನ ಪ್ರಾರ್ಥನೆಗಳಿಂದ ದೂರವಾಗುತ್ತವೆ. ಅಂತಹ ನಂಬಿಕೆಗಳಿಂದಲೇ ಸಮಾಜ ಬಾಂಧವರು ಸೇರಿಕೊಂಡು ಅಲ್ಲಲ್ಲಿ ಇಂತಹ ಕೂಟಗಳನ್ನು ಏರ್ಪಡಿಸುತ್ತಿದ್ದಾರೆ. ನಮ್ಮ ಭಾರತ ದೇಶವು ವಿವಿಧತೆಯಲ್ಲಿ ಏಕತೆಯನ್ನು ಹೊಂದಿದೆ. ಅನೇಕ ಜಾತಿ, ಧರ್ಮಗಳಿದ್ದರೂ ಅವರವರ ಆಚರಣೆಗಳು ಮಾತ್ರ ಭಿನ್ನವಾಗಿವೆ. ದೇವನೊಬ್ಬ ನಾಮ ಹಲವು ಎಂಬಂತೆ ಎಲ್ಲರಲ್ಲಿಯೂ ಒಬ್ಬನೇ ದೇವರನ್ನು ಕಾಣುತ್ತಿದ್ದೇವೆ. ಪ್ರೀತಿ, ವಿಶ್ವಾಸಗಳನ್ನು ಬೆಳೆಸಿಕೊಳ್ಳುತ್ತ ಪರಸ್ಪರ ಅಣ್ಣ– ತಮ್ಮಂದಿರ ಸಂಬಂಧಗಳನ್ನು ಹೊಂದಿ ಶಾಂತಿಯ ಮಂತ್ರ ಜಪಿಸುತ್ತಿದ್ದೇವೆ. ಇದೇ ಕಾರಣಕ್ಕೆ ಭಾರತವು ವಿಶ್ವದಲ್ಲಿಯೇ ಭಿನ್ನ ರಾಷ್ಟ್ರವಾಗಿದೆ ಎಂದು ಅವರು ಹೇಳಿದರು.

ಯಾರಿಗೂ ಕೆಟ್ಟದ್ದನ್ನು ಬಗೆಬಾರದು. ಕನಸು, ಮನಸ್ಸಿನಲ್ಲಿಯೂ ಅಂತಹ ಕೆಟ್ಟ ಭಾವನೆಗಳನ್ನು ಕಾಣಬಾರದು. ನಮ್ಮಿಂದ ಒಳ್ಳೆಯ ಕೆಲಸಗಳು ಆದರೆ ಮಾಡೋಣ. ಆದರೆ, ಎಂದಿಗೂ ಕೆಟ್ಟ ಕೆಲಸಗಳನ್ನು ಮಾಡಬಾರದು. ಒಂದು ವೇಳೆ ಕೆಟ್ಟ ಕೆಲಸಗಳನ್ನು ಮಾಡುವ ಪ್ರಸಂಗ ಬಂದರೆ ಅದರಿಂದ ದೂರವಾಗಿ ಮೌನದಿಂದ ಇರಬೇಕು ಎಂದು ಅವರು ತಿಳಿಸಿದರು.

ಮೂಡಲಗಿ ಪಟ್ಟಣದಲ್ಲಿ ಕ್ರೈಸ್ತ ಬಾಂಧವರು ಹಮ್ಮಿಕೊಂಡಿರುವ ಸ್ವಸ್ಥತೆಯ ಮಹೋತ್ಸವ ಕೂಟಗಳು ಯಶಸ್ವಿಯಾಗುತ್ತಿದೆ. ಅನ್ಯ ಸಮಾಜದ ಬಾಂಧವರು ಇದರಲ್ಲಿ ಭಾಗಿಯಾಗಿದ್ದಾರೆ. ಇದೇ ಸಹೋದರತ್ವ ಸಂಕೇತವಾಗಿದೆ ಎಂದು ಹೇಳಿದರು.

ಶಾಸಕ ಬಾಲಚಂದ್ರ ಜಾರಕಿಹೊಳಿಯವರನ್ನು ಚರ್ಚ್ ಪರವಾಗಿ ಸಮಾಜ ಬಾಂಧವರು ಸತ್ಕರಿಸಿದರು.

ಇದೇ ಸಂದರ್ಭದಲ್ಲಿ ಡಾ. ಜಾಬ್ ಮುಕಾಡಿಯವರು ಅರಭಾವಿ ಕ್ಷೇತ್ರದಲ್ಲಿ ಜಾತ್ಯತೀತ ಮತ್ತು ಪಕ್ಷಾತೀತವಾಗಿ ಸಮಗ್ರ ಅಭಿವೃದ್ಧಿಗೆ ಶ್ರಮಿಸುತ್ತಿರುವ ಎಲ್ಲ ಸಮುದಾಯಗಳ ಹಿತ ಚಿಂತಕರಾಗಿರುವ ಶಾಸಕ ಬಾಲಚಂದ್ರ ಜಾರಕಿಹೊಳಿ ಮತ್ತು ಅವರ ಕುಟುಂಬದ ಏಳ್ಗೆಗೆ ಏಸುಕ್ರಿಸ್ತ ಒಳ್ಳೆಯದು ಮಾಡಲೆಂದು ಪ್ರಾರ್ಥಿಸಿದರು.

ದೈವ ಸಂದೇಶಕರಾಗಿ ಯುನೈಟೆಡ್ ಕಿಂಗ್ಡಮ್ ನ ಖ್ಯಾತ ವೈದ್ಯ ಹಾಗೂ ಧರ್ಮ ಬೋಧಕ ಡಾ. ಜಾಬ್ ಮುಕಾಡಿ,

ಬೆಂಗಳೂರು ಎಎಲ್ಜಿ ಸಂಸ್ಥೆಯ ಅಧ್ಯಕ್ಷ ರಾಜೇಶ ಫೆಲಿಪ್ಸ್ ಮುಂತಾದ ಗಣ್ಯರು ಉಪಸ್ಥಿತರಿದ್ದರು.

ಅಧ್ಯಕ್ಷತೆಯನ್ನು ಮೆಥೋಡಿಸ್ಟ್ ಚರ್ಚ್ ಸಭಾಪಾಲಕ ರೇ. ವಿಜಯಕುಮಾರ್ ಮೂಡಲಗಿ ವಹಿಸಿದ್ದರು.

ವೇದಿಕೆಯಲ್ಲಿ ಮುಖಂಡರಾದ ಆರ್.ಪಿ. ಸೋನವಾಲಕರ, ಜಯಾನಂದ ಪಾಟೀಲ, ವಿಜಯ ಸೋನವಾಲಕರ, ರವಿ ಸಣ್ಣಕ್ಕಿ, ಮರೆಪ್ಪ ಮರೆಪ್ಪಗೋಳ, ರಮೇಶ ಸಣ್ಣಕ್ಕಿ, ಶಿವು ಚಂಡಕಿ, ಸೈದಪ್ಪ ಗದಾಡಿ, ಚನ್ನಪ್ಪ ಅಥಣಿ, ಈರಣ್ಣ ಬನ್ನೂರ, ಮಲಿಕ ಹುಣಶ್ಯಾಳ, ಈಶ್ವರ ಕಂಕಣವಾಡಿ, ಹಣಮಂತ ಗುಡ್ಲಮನಿ, ಸಿದ್ದು ಗಡ್ಡೇಕಾರ, ಮುಖ್ಯಾಧಿಕಾರಿ ತುಕಾರಾಮ ಮಾದರ, ಶಿವಬೋಧ ಗೋಕಾಕ, ಮೂಡಲಗಿ ಪುರಸಭೆಯ ಮಾಜಿ ಸದಸ್ಯರು, ಅನೇಕ ಗಣ್ಯರು, ಸಮುದಾಯಗಳ ಮುಖಂಡರು ಉಪಸ್ಥಿತರಿದ್ದರು.

## ಅಥಣಿ ಕ್ಷೇತ್ರದಲ್ಲಿ ಯಾವೊಬ್ಬ ರೈತರ ಮಗನೂ ಶಿಕ್ಷಣದಿಂದ ವಂಚಿತನಾಗಬಾರದು: ಲಕ್ಷ್ಮಣ ಸವದಿ




**ಬೆಳಗಾವಿ ವಾರ್ತೆ ಅಥಣಿ:** ತಾಲೂಕಿನಲ್ಲಿ ಎಸ್‌ಎಸ್ ಎಲ್‌ಸಿ ಮತ್ತು ದ್ವಿತೀಯ ಪಿಯುಸಿ ಪರೀಕ್ಷೆಗಳಲ್ಲಿ 85%ಕ್ಕಿಂತ ಅಧಿಕ ಅಂಕ ಪಡೆದ 2000ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಮಾಜಿ ಉಪಮುಖ್ಯಮಂತ್ರಿ ಹಾಗೂ ಶಾಸಕ ಲಕ್ಷ್ಮಣ ಸವದಿ ಅವರ ನೇತೃತ್ವದಲ್ಲಿ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಆಯೋಜನೆ ಮಾಡಲಾಗಿತ್ತು

ಹಲ್ಯಾಳದ ರೈತ ಸಭಾ ಭವನದಲ್ಲಿ ನಡೆದ ಈ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಶಾಸಕ ಲಕ್ಷ್ಮಣ ಸವದಿ ಅವರು ಗ್ರಾಮೀಣ ಭಾಗದ ಮಕ್ಕಳು ಪ್ರತಿಭೆಯಲ್ಲಿ ಯಾರಿಗೂ ಕಡಿಮೆ ಇಲ್ಲ ಸರಿಯಾದ ಪ್ರೋತ್ಸಾಹ ಸಿಕ್ಕರೆ ಸಾಕು ನಮ್ಮ ರಾಜ್ಯ ರಾಷ್ಟ್ರ ಮಟ್ಟದಲ್ಲಿ ಸಾಧನೆ ಮಾಡುತ್ತಾರೆ 85%ಕ್ಕಿಂತ ಹೆಚ್ಚು ಅಂಕ ಪಡೆದ ಈ 2000 ಮಕ್ಕಳು ನಮ್ಮ ತಾಲೂಕಿನ ಹೆಮ್ಮೆ ಇವರ ಅಂಕ ಮಾತ್ರ ಮುಖ್ಯವಲ್ಲ ಮುಂದೆ ಸಮಾಜಕ್ಕೆ ಒಳ್ಳೆಯ ಪ್ರಜೆಗಳಾಗಿ ಬೆಳೆಯಬೇಕು ನಿಮ್ಮ ಮುಂದಿನ ಶಿಕ್ಷಣಕ್ಕೆ ನನ್ನ ಸಂಪೂರ್ಣ ಬೆಂಬಲ ಇರುತ್ತದೆ ಎಂದ ಅವರು ಗ್ರಾಮೀಣ ಭಾಗದ ವಿದ್ಯಾರ್ಥಿಗಳ ಶೈಕ್ಷಣಿಕ ಸಾಧನೆಯನ್ನು ಗುರುತಿಸಿ ಪ್ರೋತ್ಸಾಹಿಸುವ ಉದ್ದೇಶದಿಂದ ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಅಥಣಿ ಕ್ಷೇತ್ರದಲ್ಲಿ ಯಾವೊಬ್ಬ ರೈತನ ಮಗನು ಶಿಕ್ಷಣದಿಂದ ವಂಚಿತನಾಗಬಾರದು ಈ ಬಾರಿಯ ಹಾಗೂ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ರಾಜ್ಯಕ್ಕೆ ಪ್ರಥಮ ಹಾಗೂ ದ್ವಿತೀಯ ಸ್ಥಾನವನ್ನು ನಮ್ಮ ತಾಲೂಕಿನ ವಿದ್ಯಾರ್ಥಿಗಳು ಪಡೆದುಕೊಂಡಿರುವುದು ಹೆಮ್ಮೆಯ ಸಂಗತಿ ಜೊತೆಗೆ ಸವದಿ ಗ್ರಾಮದ ಬಸವರಾಜ ಎಂಬ ವಿದ್ಯಾರ್ಥಿ ಐಎಫ್‌ಎಸ್‌ಸಿ ಪರೀಕ್ಷೆಯಲ್ಲಿ ದೇಶಕ್ಕೆ ಪ್ರಥಮ ರ್ಯಾಂಕ ಗಳಿಸಿ ಇಡೀ ದೇಶದ ಗಮನ ಸೆಳೆದಿದ್ದಾನೆ ಗ್ರಾಮೀಣ ಭಾಗದಲ್ಲಿ ಶೇ.85 ಕ್ಕಿಂತ ಹೆಚ್ಚು ವಿದ್ಯಾರ್ಥಿಗಳು ಉತ್ತಮ ಅಂಕ ಪಡೆಯಲು ಪ್ರತಿ ಗ್ರಾಮದಲ್ಲಿಯೂ ಎಸ್‌ಎಸ್‌ಎಲ್‌ಸಿ ವರೆಗೆ ಶಾಲೆಗಳಿರುವುದೇ ಮುಖ್ಯ ಕಾರಣ ಈ ಸಾಧನೆಯು ಇತರ ವಿದ್ಯಾರ್ಥಿಗಳಿಗೆ ಮುಂದಿನ ಬಾರಿ ಇನ್ನೂ ಹೆಚ್ಚು ಅಂಕ ಗಳಿಸುವ ಕಿಚ್ಚು ಹಚ್ಚಬೇಕು ಮಕ್ಕಳು ಎಷ್ಟೇ ಉನ್ನತ ಸ್ಥಾನಕ್ಕೇರಿದರೂ ತಂದೆ ತಾಯಿ ಮತ್ತು ಶಿಕ್ಷಣ ನೀಡಿದ ಗುರುವನ್ನು ಎಂದಿಗೂ ಮರೆಯಬಾರದು ಎಂದು ಕಿವಿಮಾತು ಹೇಳಿದರು ಅಲ್ಪಸಂಖ್ಯಾತ ಹಾಗೂ ಹಿಂದುಳಿದ ಜನಾಂಗದವರು ಇನ್ನೂ ಹೆಚ್ಚಾಗಿ ಶಿಕ್ಷಣದತ್ತ ಗಮನ ಹರಿಸಬೇಕಿದೆ ಈ ನಿಟ್ಟಿನಲ್ಲಿ ಕ್ಷೇತ್ರದಲ್ಲಿ ಅಲ್ಪಸಂಖ್ಯಾತರ ಶಾಲೆಗಳನ್ನು ಪ್ರಾರಂಭಿಸಲಾಗಿದೆ ನಿಮ್ಮ ಮಕ್ಕಳನ್ನು ಶಿಕ್ಷಣವಂತರನ್ನಾಗಿ ಮಾಡಿ ಎಂದು ಮನವಿ ಮಾಡಿದರು.

ಇನ್ನೂ ಪ್ರಾಸ್ತಾವಿಕವಾಗಿ ಕಾಂಗ್ರೆಸ್ ಮುಖಂಡ ಚಿದಾನಂದ ಸವದಿ ಹಾಗೂ ಎಸ್ ಬಿ ವಿಜಡಂ ಕರಿಯರ್ ಅಕಾಡೆಮಿಯ ಶರಣಯ್ಯ ಭಂಡಾರಿಮಠ ಮಾತನಾಡಿದರು.

ಈ ವೇಳೆ ಪರಮಪೂಜ್ಯ ಮನಿಪ್ರ ಶಿವಬಸವ ಮಹಾಸ್ವಾಮಿಜಿ ಗಚ್ಚಿನಮಠ ಅಥಣಿ ಹಾಗೂ ಮನಿಪ್ರ ಮಹಾಂತಪ್ರಭು ಸ್ವಾಮಿಗಳು ವಿರಕ್ತಮಠ ಶೇಗುಣಸಿ ಇವರ ಆಶೀರ್ವಚನ ನೀಡಿ ತಾಲೂಕಿನ ಎಲ್ಲ ಮಕ್ಕಳಿಗೂ ಶಿಕ್ಷಣದ ಬೆಳಕು ದೊರೆಯಲಿ ಮಕ್ಕಳೆ ನೀವು ವಿದ್ಯಾಭ್ಯಾಸಕ್ಕಾಗಿ ಯಾವುದೇ ದೇಶಗಳಿಗೆ ಹೋಗಿ ಅಲ್ಲಿ ಉನ್ನತ ಶಿಕ್ಷಣ ಪಡೆದು ದೊಡ್ಡ ಸ್ಥಾನಕ್ಕೆ ಏರಿದರೂ ಮತ್ತೆ ನಿಮ್ಮ ಮಾತೃಭೂಮಿಗೆ ಈ ಕರ್ಮಭೂಮಿಗೆ ಸೇವೆ ಸಲ್ಲಿಸಲು ಬರಲೇಬೇಕು ಏಕೆಂದರೆ ನಿಮ್ಮನ್ನು ಬೆಳೆಸಿದ ಮಣ್ಣಿನ ಋಣ ತೀರಿಸುವುದು ನಿಮ್ಮ ಕರ್ತವ್ಯ ನೀವು ಎಷ್ಟೇ ಎತ್ತರಕ್ಕೆ ಬೆಳೆದರೂ ಜನ್ಮ ನೀಡಿದ ತಂದೆ ತಾಯಿಯರನ್ನು ಅಕ್ಷರ ಕಲಿಸಿದ ಗುರುವನ್ನು ಎಂದೂ ಮರೆಯಬೇಡಿ ನಿಮ್ಮ ಸಾಧನೆಯ ಮೂಲಕ ತಂದೆ ತಾಯಿಯ ಋಣವನ್ನು ತೀರಿಸುವಂತಾಗಲಿ ವಿದ್ಯೆ ಕಲಿತು ಸಮಾಜಕ್ಕೆ ಬೆಳಕಾಗಿರೆಂದರು. ಸಮಾರಂಭದಲ್ಲಿ ಸುಮಾರು 2000 ವಿದ್ಯಾರ್ಥಿಗಳು ಭಾಗವಹಿಸಿ ಸತ್ಕಾರವನ್ನು ಸ್ವೀಕರಿಸಿದರು.

ಈ ಸಂದರ್ಭದಲ್ಲಿ ಮಾಜಿ ಜಿಲ್ಲಾ ಪಂಚಾಯತ ಸದಸ್ಯರಾದ ಶ್ರೀಶೈಲ ನಾರಗೊಂಡ,ಶಿದರಾಯ ಯಲಡಗಿ, ಕ್ಷೇತ್ರ ಶಿಕ್ಷಣಾಧಿಕಾರಿ ಎಮ್ ಆರ್ ಮುಂಜೆ, ಸಂತೋಷ ಹಳ್ಳೂರ, ವಿರಣ್ಣ ವಾಲಿ, ಗುತ್ತಿಗೆದಾರ ಶಿವರುದ್ರ ಗೂಳಪ್ಪನ್ನವರ, ಶಿವು ನಾಯಿಕ,ರಾಮನಗೌಡ ಪಾಟೀಲ, ಪುರಸಭೆ ಸ್ಥಾಯಿ ಸಮಿತಿ ಅಧ್ಯಕ್ಷ ದತ್ತಾ ವಾಸ್ಟರ್,ಸಂತೋಷ ಸಾವಡಕರ,ಸುಮಿತ ಸವದಿ,ಶಿವಕುಮಾರ ಸವದಿ,ಸಿದ್ಧಾರೂಢ ಸವದಿ,ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಉಚಿತ ಆರೋಗ್ಯ ತಪಾಸಣಾ ಶಿಬಿರ



**ಬೆಳಗಾವಿ ವಾರ್ತೆ ಕುಂದಗೋಳ:** ತಾಲೂಕಿನ ಸಂಶಿ ಕೆಎಲ್ಇ ಕಾಲೇಜು ಮತ್ತು ಹುಬ್ಬಳ್ಳಿ ಕೆಎಲ್ಇ ಆಸ್ಪತ್ರೆ-ಸಂಶೋಧನಾ ಸಂಸ್ಥೆ ಸಹಯೋಗದಲ್ಲಿ ನಡೆಯಿತು. ಉಚಿತ ಆರೋಗ್ಯ ತಪಾಸಣಾ ಶಿಬಿರ ಶಿಬಿರ ಉದ್ಘಾಟಿಸಿದ ಶಾಸಕ ಎಂ ಆರ್ ಪಾಟೀಲ ಮಾತನಾಡಿ ಪ್ರತಿಯೊಬ್ಬರೂ ತಮ್ಮ ಆರೋಗ್ಯದ ಬಗ್ಗೆ ನಿರ್ಲಕ್ಷ ತೋರದೆ ಸರಿಯಾದ ಸಮಯಕ್ಕೆ ಚಿಕಿತ್ಸೆ ಪಡೆದು ಕೊಳ್ಳುವುದು ಸೂಕ್ತ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಹುಬ್ಬಳ್ಳಿ ಕೆಎಲ್ಇ ಆಸ್ಪತ್ರೆ ಹಾಗೂ ವೈದ್ಯಕೀಯ ಸಂಶೋಧನಾ ಕೇಂದ್ರ ಚೇರ್ಮನ್ ಶಂಕರಣ್ಣ ಮುನವಳ್ಳಿ ಹುಬ್ಬಳ್ಳಿ ಜೆಜಿಎಂಎಂ ಆಸ್ಪತ್ರೆ ನಿರ್ದೇಶಕ ಡಾ. ಎಂ.ಜಿ.ಹಿರೇಮಠ ಪ್ರಾಸ್ತಾವಿಕವಾಗಿ ಮಾತನಾಡಿದರು.

ಸಂಶಿ ಕೆಎಲ್ಇ ಕಾಲೇಜು ಸ್ಥಾನಿಕ ಅಧ್ಯಕ್ಷ ಎ ಬಿ ಉಪ್ಪಿನ ಮಾತನಾಡಿ ಸಂಶಿಯಲ್ಲಿ ಬೃಹತ್ ಉಚಿತ ಆರೋಗ್ಯ ಶಿಬಿರ ಯಶಸ್ವಿ ಆಗಿದೆ. ಶಿಬಿರಾರ್ಥಿಗಳು ವೈದ್ಯರ ಸಲಹೆಯೊಂದಿಗೆ ಉತ್ತಮ ಚಿಕಿತ್ಸೆ ಪಡೆದು ಗುಣಮುಖರಾದರೆ ಎಂದರು.

ಜೆಜಿಎಂ ಕಾಲೇಜು ಪ್ರಾಚಾರ್ಯೆ ಡಾ.ಶಾರದಾ ಮೆಟಗುಡ, ಜೆಜಿಎಂ ಆಡಳಿತಾಧಿಕಾರಿ ಡಾ. ಅರುಣಕುಮಾರ ಎಮ್, ನಿರ್ದೇಶಕ ಎಚ್ ಎನ್ ಪಾಟೀಲ, ಬಿ.ಬಿ.ಪಾಟೀಲ, ಶಿಕ್ಷಕ ಎಂ. ಎಫ್ ನಧಾಫ್ ಹಾಗೂ ಕಾಲೇಜು ಸಿಬ್ಬಂದಿಯವರಿದ್ದರು.

ಸಂಶಿ ಕಾಲೇಜು ಪ್ರಾಚಾರ್ಯ ಪ್ರೋ. ರಮೇಶ ಅತ್ತಿಗೇರಿ ಸ್ವಾಗತಿಸಿದರು.

# ಯುವಕರು ಕ್ರೀಡಾಮನೋಭಾವನೆ ಬೆಳೆಸಿಕೊಳ್ಳಿ



**ಬೆಳಗಾವಿ ವಾರ್ತೆ ಅಣ್ಣಿಗೇರಿ:** ನಲವಡಿ ಜಿಲ್ಲಾ ಪಂಚಾಯತಿ ವ್ಯಾಪ್ತಿಯ ಯುವಕರಿ ಗಾಗಿ ಬಿಜೆಪಿ ಮುಖಂಡರಾದ ದೇವರಾಜ್ ಬ. ದಾಡಿಬಾವಿ ಆ ಯೋಜನೆ ಮಾಡಿದ ಪ್ರಧಾನಿ ನರೇಂದ್ರ ಮೋದಿ ನಾಮಾಂಕಿತ ನಮೋ ಕ್ರಿಕೆಟ್ ಪಂದ್ಯಾವಳಿಗಳನ್ನು ಜಿಲ್ಲಾ ಪಂಚಾಯತ್ ಮಾಜಿ ಅಧ್ಯಕ್ಷರು ಬಿಜೆಪಿ ಮುಖಂಡರಾದ ಸುರೇಶ್ ಗಾಣಿಗೇರ್ ಉದ್ಘಾಟನೆ ನೆರವೇರಿಸಿ, ಯುವಕರು ಕ್ರೀಡಾಮನೋಭಾವನೆ ಬೆಳೆಸಿಕೊಳ್ಳಲು ಕರೆ ನೀಡಿದರು. ಆಯೋಜಕರಾದ ದೇವರಾಜ್ ದಾಡಿಬಾವಿ ಅವರು ಮಾತನಾಡಿ ಪ್ರಧಾನಿ ನರೇಂದ್ರ ಮೋದಿ ಹಾಗೂ ಕೇಂದ್ರ ಸಚಿವರಾದ ಪ್ರಹ್ಲಾದ ಜೋಶಿ ರವರು ಕ್ರೀಡೆಗಾಗಿ ಸರ್ಕಾರದಿಂದ ಸಾಕಷ್ಟು ನೆರವು ನೀಡುತ್ತಿದ್ದು ಯುವಕರು ಇದರ ಸದುಪಯೋಗ ಪಡಿಸಿಕೊಳ್ಳಲು ಕರೆ ನೀಡಿದರು. ಮುಖಂಡರಾದ ರಘು ಪಾಟೀಲ್, ಬಸವರಾಜ ರಾಮಣ್ಣವರ್, ಎಚ್. ಕೆ. ಪಾಟೀಲ್, ಮಹಾದೇವ ಚುಂಚನೂ ರ್, ಹನುಮಂತಗೌಡ ರಾಯನಗೌಡ, ಬಸವರಾಜ ರಾಮಣ್ಣವರ, ಡಾ. ಬಸವರಾಜ್ ಯತ್ನಳ್ಳಿ, ಸೋಮಶೇಖ ರಯ್ಯ ಹಿರೇಮಠ, ಪ್ರತೀಕ್ ಕುಂದ ಗೋಳ, ಮಂಜುನಾಥ್ ಹಡಪದ, ಅಲೋಕ್ ಕುಲಕರ್ಣಿ ಮತ್ತಿತರರು ಉಪಸ್ಥಿತರಿದ್ದರು.

## ಕುಂಟೋಜಿ ಗ್ರಾಮದಲ್ಲಿ ನೀರಿನ ಬರೆ; ಗ್ರಾಪಂ ಮುಂದೆ ಅರೆಬೆತ್ತಲೆ ಪ್ರತಿಭಟನೆ!

# ಪಿಡಿಒ ಬೇಜವಾಬ್ದಾರಿತನಕ್ಕೆ ಬಿಸಿ ಮುಟ್ಟಿಸಿದ ಗ್ರಾಮಸ್ಥರು: ಗ್ರಾಪಂ ಮುಂದೆ ಅರೆಬೆತ್ತಲೆ ಪ್ರತಿಭಟನೆ, ಟ್ಯಾಂಕರ್ ನೀರಿಗಾಗಿ ಆಗ್ರಹ!



**ಬೆಳಗಾವಿ ವಾರ್ತೆ ಮುದ್ದೇಬಿಹಾಳ:** ಕುಡಿಯುವ ನೀರಿನ ಸಮಸ್ಯೆಯನ್ನು ಬಗೆಹರಿಸುವಲ್ಲಿ ತೀವ್ರ ವಿಳಂಬ ಧೋರಣೆ ಅನುಸರಿಸುತ್ತಿರುವ ಗ್ರಾಮ ಪಂಚಾಯತಿ ಅಧಿಕಾರಿಗಳ ನಡೆಗೆ ಬೇಸತ್ತು, ತಾಲೂಕಿನ ಕುಂಟೋಜಿ ಗ್ರಾಮಸ್ಥರು ಪಂಚಾಯತಿ ಕಾರ್ಯಾಲಯದ ಮುಂದೆ ಅರೆಬೆತ್ತಲೆಯಾಗಿ ನಿಂತು ವಿನೂತನ ಪ್ರತಿಭಟನೆ ನಡೆಸಿದ ಘಟನೆ ಸೋಮವಾರ ಜರುಗಿದೆ.

**23 ದಿನಗಳಿಂದ ನೀರಿನ ಪರದಾಟ:**

ಕುಂಟೋಜಿ ಗ್ರಾಮದಲ್ಲಿ ಕಳೆದ 23 ದಿನಗಳಿಂದ ಕುಡಿಯುವ ನೀರಿಲ್ಲದೆ ಜನಸಾಮಾನ್ಯರು, ಜಾನುವಾರುಗಳು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ. ಗ್ರಾಮದ ಮುಖ್ಯ ಪೈಪ್ ಲೈನ್ ಒಡೆದು 15 ದಿನಗಳಾಗುತ್ತಾ ಬಂದರೂ ರಿಪೇರಿ ಮಾಡಲು ಅಧಿಕಾರಿಗಳು ಮುಂದಾಗಿಲ್ಲ. ಮತ್ತೊಂದೆಡೆ ಜೆಜಿಎಂ ಯೋಜನೆಯೂ ಕಳೆದ 10 ದಿನಗಳಿಂದ ಸಂಪೂರ್ಣ ಕೈಕೊಟ್ಟಿದೆ. ಗ್ರಾಮಕ್ಕೆ ಟ್ಯಾಂಕರ್ ಮೂಲಕ ನೀರು ಪೂರೈಸುವಂತೆ ಪಿಡಿಒ ಅವರಿಗೆ ಪದೇ ಪದೇ ಮನವಿ ಮಾಡಿದರೂ ಅಧಿಕಾರಿಗಳು ನಿರ್ಲಕ್ಷ್ಯ ವಹಿಸಿದ್ದಾರೆ ಎಂದು ಸಿದ್ದು ಹೆಬ್ಬಾಳ ಅವರ ಗಂಭೀರವಾಗಿ ಆರೋಪಿಸಿದ್ದಾರೆ.

**ಅರೆಬೆತ್ತಲೆ ಪ್ರತಿಭಟನೆ:**

ಅಧಿಕಾರಿಗಳ ಬೇಜವಾಬ್ದಾರಿತನಕ್ಕೆ ಆಕ್ರೋಶ ವ್ಯಕ್ತಪಡಿಸಿದ ಗ್ರಾಮದ ಯುವಕರು ಹಾಗೂ ಸಾರ್ವಜನಿಕರು, ಸೋಮವಾರ ಬೆಳಿಗ್ಗೆ 7:50ರ ಸುಮಾರಿಗೆ ಗ್ರಾಮ ಪಂಚಾಯತಿ ಕಚೇರಿ ಮುಂದೆ ಜಮಾಯಿಸಿ, ಶರ್ಟ್ ಬಿಚ್ಚಿ ಅರೆಬೆತ್ತಲೆ ಪ್ರತಿಭಟನೆ ನಡೆಸುವ ಮೂಲಕ ಆಡಳಿತದ ವಿರುದ್ಧ ಘೋಷಣೆಗಳನ್ನು ಕೂಗಿದರು.

ಈ ವೇಳೆ ಮಾತನಾಡಿದ ಗ್ರಾಮದ ಯುವ ಮುಖಂಡ ಸಿದ್ದು ಹೆಬ್ಬಾಳ, "ಪಿಡಿಒ ಮೋಹನ್ ಹುಲ್ಲೂರ ಅವರ ಬೇಜವಾಬ್ದಾರಿತನದಿಂದ ಇಡೀ ಗ್ರಾಮ ನೀರಿನ ದಾಹದಿಂದ ಬಳಲುತ್ತಿದೆ. ಪ್ರತಿ ಮನೆ ಮನೆಗೂ ನೀರು ಪೂರೈಕೆಯಾಗುವವರೆಗೂ ನಮ್ಮ ಈ ಹೋರಾಟ ನಿಲ್ಲುವುದಿಲ್ಲ ಎಂದು ಗ್ರಾಮಸ್ಥರು ಎಚ್ಚರಿಕೆ ನೀಡಿದರು.

**ವಿದ್ಯುತ್ ಕಂಬಗಳು ಬಿದ್ದಿದ್ದೇ ಕಾರಣ – ಪಿಡಿಒ ಸಮಜಾಯಿಷಿ:**

ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿದ ಕುಂಟೋಜಿ ಗ್ರಾಪಂ ಪಿಡಿಒ ಮೋಹನ್ ಹುಲ್ಲೂರ, "ಕಳೆದ ಕೆಲವು ದಿನಗಳ ಹಿಂದೆ ಸುರಿದ ಭಾರಿ ಮಳೆ ಮತ್ತು ಬಿರುಗಾಳಿಗೆ ಬಹುಹಳ್ಳಿ ಕುಡಿಯುವ ನೀರಿನ ಯೋಜನೆಗೆ ವಿದ್ಯುತ್ ಪೂರೈಸುವ ಕಂಬಗಳು ಉರುಳಿ ಬಿದ್ದಿವೆ. ಇದರಿಂದಾಗಿ ಕುಂಟೋಜಿ ಸೇರಿದಂತೆ ಒಟ್ಟು 18 ಹಳ್ಳಿಗಳ ನೀರಿನ ಸರಬರಾಜಿನಲ್ಲಿ ವ್ಯತ್ಯಯವಾಗಿದೆ. ಸದ್ಯಕ್ಕೆ ಪ್ರತಿಯೊಬ್ಬರ ಮನೆ ಮನೆಗೆ ನೀರು ಕೊಡಲು ಸಾಧ್ಯವಾಗದಿದ್ದರೂ, ಮಳೆಪ್ಪ ಗುಡಿ ಹತ್ತಿರದ ಕೊಳವೆ ಬಾವಿಗೆ ಗ್ರಾಪಂ ವತಿಯಿಂದ ಹೊಸ ಮೋಟಾರ್ ಖರೀದಿಸಲಾಗಿದೆ. ನಾಳೆಯೊಳಗೆ ಕೊಳವೆ ಬಾವಿ ಮೂಲಕ ನೀರು ಸರಬರಾಜು ಮಾಡಲು ಕ್ರಮ ಕೈಗೊಳ್ಳಲಾಗುವುದು. ಗ್ರಾಮದಲ್ಲಿರುವ 9 ಕೊಳವೆ ಬಾವಿಗಳ ಪೈಕಿ 6 ಬಾವಿಗಳು ಸದ್ಯ ಚಾಲ್ತಿಯಲ್ಲಿವೆ" ಎಂದು ಸ್ಪಷ್ಟನೆ ನೀಡಿದರು.

ಈ ಸಂದರ್ಭದಲ್ಲಿ ?ಪ್ರತಿಭಟನೆಯಲ್ಲಿ ಗ್ರಾಮ ಪಂಚಾಯತಿ ಪ್ರಮುಖರಾದ ಚಂದ್ರಶೇಖರ ಲಿಂಗದಳ್ಳಿ, ಮುತ್ತು ಮಡಿವಾಳರ, ಮಂಜುನಾಥ ಜುಗತಿ, ಪ್ರಕಾಶ್ ಹುಗಾರ, ಶೇಖಪ್ಪ ಕೋಳೂರ, ಭೀಮನಗೌಡ ಬಿರಾದಾರ, ವಿಜಯಕುಮಾರ ಶಿಕಲವಾಡಿಮಠ, ಮಾಜಿ ಗ್ರಾಪಂ ಸದಸ್ಯ ಸಂಗಮೇಶ ಗುತ್ತೆದಾರ, ರಾಜು ಅಗ್ನಿ, ರಾಜು ಕಾಟಿ, ಅನಿಲ ಪಲ್ಲೆದ, ವಿನೋದ ಹೊಳಿ, ರಾಮಣ್ಣ ಕವಡಿಮಟ್ಟಿ, ದುರ್ಗಪ್ಪ ಕವಡಿಮಟ್ಟಿ ಸೇರಿದಂತೆ ಗ್ರಾಮದ ನೂರಾರು ಯುವಕರು ಹಾಗೂ ಹಿರಿಯರು ಪಾಲ್ಗೊಂಡಿದ್ದರು.

> "ಕುಂಟೋಜಿ ಗ್ರಾಪಂ ಪಿಡಿಒ ಮೋಹನ್ ಹುಲ್ಲೂರ ಅವರ ಬೇಜವಾಬ್ದಾರಿತನದಿಂದಾಗಿ ಗ್ರಾಮಸ್ಥರು ಹನಿ ನೀರಿಗೂ ಪರದಾಡುವಂತಾಗಿದೆ. ಮನೆ ಮನೆಗೆ ನೀರು ಬರುವವರೆಗೂ ನಮ್ಮ ಹೋರಾಟ ನಿರಂತರವಾಗಿ ಮುಂದುವರಿಯುತ್ತದೆ."
>
> **ಸಿದ್ದು ಹೆಬ್ಬಾಳ, ಗ್ರಾಮದ ಯುವ ಮುಖಂಡ**

## ಕುಲಕ್ಕೆ ತಿಲಕ ಸಾಂಸ್ಕೃತಿಕ ಬಳಗದ ವತಿಯಿಂದ ನಿವೃತ್ತ ಸೈನಿಕರಿಗೆ ಸನ್ಮಾನ

# ಸೈನಿಕರ ಸೇವೆಯನ್ನು ಸ್ಮರಿಸುವುದು ಅತ್ಯಂತ ಪವಿತ್ರ ಕಾರ್ಯವಾಗಿದೆ



**ಬೆಳಗಾವಿ ವಾರ್ತೆ ಗದಗ :** ಸುಧೀರ್ಘಾವಧಿಯಲ್ಲಿ ದೇಶ ಸೇವೆಗೈದು ದೇಶಪ್ರೇಮ ಮೆರೆದ ಸೈನಿಕರನ್ನು ಗೌರವಿಸುವುದು ಸಹ ರಾಷ್ಟ್ರೀಯ ಸೇವೆಯಾಗಿದೆ ಎಂದು ತರಳುಬಾಳು ಸರಕಾರಿ ವಸತಿಯುಕ್ತ ಮಾದರಿ ಪ್ರಥಮ ದರ್ಜೆ ಮಹಾವಿದ್ಯಾ ಲಯ ಸಹ ಪ್ರಾಧ್ಯಾಪಕ 'ರಾದ ಡಾ. ಈರಣ್ಣ ಲಗಳೂರು ಅವರು ಹೇಳಿದರು.

ನಗರದಲ್ಲಿ ನಿವೃತ್ತರಾದ ಸೈನಿಕರಾದ ಹನುಮಂತಪ್ಪ ಬುರಡಿ ಹಾಗೂ ಭೀಮಪ್ಪ ದೊಡ್ಡಮನಿಯವರ ಸೇವೆಯನ್ನು ಗುರುತಿಸಿ ಕುಲಕ್ಕೆ ತಿಲಕ ಸಾಂಸ್ಕೃತಿಕ ಬಳಗದ ವತಿಯಿಂದ ಹಮ್ಮಿಕೊಂಡ ಸನ್ಮಾನ ಕಾರ್ಯಕ್ರಮದಲ್ಲಿ ಅವರು ಮಾತನಾಡಿ, ದೇಶದ ಗಡಿ ಭಾಗದಲ್ಲಿ ಹಗಲಿರಳು ದೇಶದ ನೆಲ, ಜಲ, ಜನರನ್ನು ರಕ್ಷಿಸಲು ಕಂಕಣಬದ್ಧರಾಗಿ ದುಡಿಯುವ ಸೈನಿಕರು ನಮ್ಮ ಹೆಮ್ಮೆ. ಅಂತಹ ಮಕ್ಕಳನ್ನು ಹೆತ್ತ ತಂದೆ-ತಾಯಿಯರೇ ಧನ್ಯರು, ಅವರ ಸೇವೆಯ ಫಲವಾಗಿಯೇ ಇಂದು ನಾವೆಲ್ಲ ನೆಮ್ಮದಿಯಿಂದ ಬದುಕುತ್ತಿದ್ದೇವೆ. ಅವರ ಸೇವೆಯನ್ನ ಸ್ಮರಿಸುವುದು ಗೌರವಿಸುವುದು ಅತ್ಯಂತ ಪವಿತ್ರ ಕಾರ್ಯವಾಗಿದೆ ಎಂದು ಬಣ್ಣಿಸಿದರು. ಈ ಸಂದರ್ಭದಲ್ಲಿ ಇನ್ನೋರ್ವ ಅತಿಥಿಗಳಾದ ಗಜೇಂದ್ರಗಡ ಎಸ್. ಎಂ. ಭೂಮರೆಡ್ಡಿ ಪದವಿ ಪೂರ್ವ ಮಹಾವಿದ್ಯಾ ಲಯದ ಪ್ರಾಚಾರ್ಯರಾದ ಜಿ. ಬಿ. ಗುಡಿಮನಿ ಅವರು ಮಾತನಾಡಿ, ದೇಶದ ಆಂತರಿಕ ನಾಗರಿಕ ಸೇವೆಯಲ್ಲಿ ತೊಡಗು ವುದು, ಸೈನಿಕ ಸೇವೆಯಲ್ಲಿ ತೊಡಗುವುದು ಬಹಳ ಭಿನ್ನವಾಗಿದ್ದು, ಸೈನಿಕರ ಸೇವೆ ಬಹಳ ಸವಾಲಿನಿಂದ ಕೂಡಿರುತ್ತದೆ, ಈ ಇರ್ವರೂ ಸೈನಿಕರು ಉತ್ತರ ಭಾರತದ ಜಮ್ಮು-ಕಾಶ್ಮೀರ, ಅರುಣಾಚಲ ಪ್ರದೇಶ, ಈಶಾನ್ಯ ಭಾರತ ಹಾಗೂ ಪಂಜಾಬ್, ರಾಜಸ್ಥಾನಗಳಂತ ಮರುಭೂಮಿ ಹಾಗೂ ಹಿಮಾಚ್ಛಾದಿತ ಪ್ರದೇಶಗಳಲ್ಲಿ ದೇಶ ಸೇವೆಗೆ ಕಟಿಬದ್ಧರಾಗಿ ತಮ್ಮ ಪ್ರಾಣವನ್ನು ಪಣಕ್ಕಿಟ್ಟು ನಮ್ಮೆಲ್ಲರನ್ನು ರಕ್ಷಿಸುತ್ತಿರುವ ಸೈನಿಕರನ್ನು ಗೌರವಿಸುತ್ತಿರುವುದು ಹೆಮ್ಮೆ ಅನಿಸುತ್ತದೆ. ಇಂತವರನ್ನು ಹೆತ್ತ ಕರುಳುಗಳೆ ಧನ್ಯರು ಎಂದು ಹೇಳಿದರು. ಈ ಸಂದರ್ಭದಲ್ಲಿ ಗಜೇಂದ್ರಗಡ ಸರಕಾರಿ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರಾದ ಬಸವರಾಜ ಜೋಗಣ್ಣ ವರ ಮಾತನಾಡಿ, ಹನುಮಂತಪ್ಪ ಬುರಡಿ ಹಾಗೂ ಭೀಮಪ್ಪ ದೊಡ್ಡಮನಿ ಅವರು ಕಲಿಯುವ ಸಮಯದಲ್ಲಿ ಸೈನಿಕರಾಗಬೇಕೆಂಬ ಉತ್ಕಟ ಬಯಕೆಯಿಂದ ಸೈನಿಕರಾಗಿ ಸಾರ್ಥಕ ಸೇವೆಯನ್ನುಗೈದಿದ್ದು, ಗ್ರಾಮೀಣ ಭಾಗದ ಬಡತನದ ಕುಟುಂಬದಲ್ಲಿ ಹುಟ್ಟಿ ತಂದೆ-ತಾಯಿಯರ ಕಷ್ಟದ ಜೀವನವನ್ನು ಕಣ್ಣಾರೆ ಕಂಡು ಕುಟುಂಬಕ್ಕೆ ಹಾಗೂ ದೇಶಕ್ಕೆ ಏನನ್ನಾದರೂ ಸೇವೆ ಮಾಡಬೇಕೆಂಬ ಛಲದಿಂದ ಮುನ್ನುಗ್ಗಿ ಯಶಸ್ವಿಯಾಗಿ ದೇಶ ಸೇವೆಗೈದು ನಿವೃತ್ತಿ ಹೊಂದುತ್ತಿದ್ದು ಅವರು ನಮ್ಮ ಮಿತ್ರರೆಂಬುದೇ ನಮ್ಮ ಹೆಮ್ಮೆ. ಅತ್ಯಂತ ಕಷ್ಟ ಕಾಲದಲ್ಲಿ ಶಿಕ್ಷಣ ಪಡೆಯುವ ವೇಳೆಯಲ್ಲಿ ಸೇವೆಗೆ ಸೇರಿದ್ದು, ನಮ್ಮ ನೆನಪಿನ ಅಂಗಳದಲ್ಲಿ ಇಂದಿಗೂ ಹಸಿರಾಗಿ ಕಾಣುತ್ತಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ

ಆರ್ಎಸ್ ಬುರಡಿ ನಿವೃತ್ತ ದೈಹಿಕ ಶಿಕ್ಷಣ ಶಿಕ್ಷಕರಾದ ಸುಣಗಾರ, ಹೆಚ್.ಎಸ್. ಮಂಗಳೂರು ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.



**ಬೆಳಗಾವಿ ವಾರ್ತೆ ಹಾನಗಲ್:** ತಾಲೂಕಿನ ಬಮ್ಮನಹಳ್ಳಿ ಗ್ರಾಮದಲ್ಲಿ ಮುಖಂಡ ಶೇಕಪ್ಪ ಬಸಾಪುರ ತಮ್ಮ ಬೆಂಬಲಿಗರೊಂದಿಗೆ ಶಾಸಕ ಶ್ರೀನಿವಾಸ ಮಾನೆ ಸಮ್ಮುಖದಲ್ಲಿ ಬಿಜೆಪಿ ತೊರೆದು ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾದರು. ಹನುಮಂತಪ್ಪ ಮರಗಡಿ, ಚನ್ನಬಸಪ್ಪ ಬಿದರಗಡ್ಡಿ, ಅರುಣ ಮಲ್ಲಮ್ಮನವರ, ಮಹ್ಮದಹನೀಫ್ ಬಾಳೂರ, ನಾಗರಾಜ ಮಲ್ಲಮ್ಮನವರ, ಚನ್ನವೀರಗೌಡ ಪಾಟೀಲ, ಶಿವಣ್ಣ ಗೊಲ್ಲರ, ಉಮೇಶ ದೊಡ್ಡಮನಿ, ಶೇಕಣ್ಣ ಕ್ಯಾಲಕೊಂಡ ಇದ್ದರು.

# ಪ್ರತಿಭಾ ಪುರಸ್ಕಾರ

**ಬೆಳಗಾವಿ ವಾರ್ತೆ ಧಾರವಾಡ:** ಧಾರವಾಡದ ಕೆಸಿಡಿ ಕಾಲೇಜ್ ಹತ್ತಿರದ ಆಲೂರು ವೆಂಕಟರಾವ್ ಸಭಾಭವನದಲ್ಲಿ ಕರ್ನಾಟಕ ರಾಜ್ಯ ಸುಡುಗಾಡು ಸಿದ್ದ/ ಸರಕಾರಿ ಅರೆ ಸರಕಾರಿ ನೌಕರರ ಸಂಘ ಕೇಂದ್ರ ಸಂಘ(ರಿ) ದ ಜಿಲ್ಲಾ ಶಾಖೆ ಧಾರವಾಡ ಇವರ ನೇತೃತ್ವದಲ್ಲಿ ಸುಡುಗಾಡ ಸಿದ್ಧ ಸಮುದಾಯದ ಜಿಲ್ಲಾ ಮಟ್ಟದ ಅತಿ ಹೆಚ್ಚು ಅಂಕಗಳಿಸಿದ ಎಸ್ ಎಸ್ ಎಲ್ ಸಿ ಹಾಗೂ ಪಿಯುಸಿ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಸಾಧಕರಿಗೆ ಸನ್ಮಾನ ಸಮಾರಂಭ ನಡೆಯಿತು.

ನವದೆಹಲಿ ಎಐಪಿಟಿಎಫ್ ಅಧ್ಯಕ್ಷರಾದ ಬಸವರಾಜ್ ಗುರುಕಾರ ಇವರು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಅಧ್ಯಕ್ಷತೆಯನ್ನು ಜಿಲ್ಲಾ ಸಂಘದ ಗೌರವಾಧ್ಯಕ್ಷರಾದ ಪಕ್ಕಿರೇಶ ಬಂಗಾರಪ್ಪ, ಡೊಕ್ಕಣ್ಣವರ ಇವರು ವಹಿಸಿದ್ದರು. ವಿಶೇಷ ಅಹ್ವಾನಿತರಾಗಿ ಸಮುದಾಯದ ಬಗ್ಗೆ ಕಾಳಜಿ ಹೊಂದಿರುವ ಧಾರವಾಡ ಜಿಲ್ಲೆಯ ಜಿಲ್ಲಾಧಿಕಾರಿಗಳಾದ ಆರ್ ಸ್ನೇಹಲ್, ಗದಗ ಜಿಲ್ಲೆಯ ಅಪರ ಜಿಲ್ಲಾಧಿಕಾರಿಗಳಾದ ದುರ್ಗೇಶ್ ಕೆ. ಆರ್.ರವರು ವೇದಿಕೆಯನ್ನು ಅಲಂಕರಿಸಿದ್ದರು. ರಾಜ್ಯ ಸಂಘದ ಅಧ್ಯಕ್ಷರಾದ ಕುಮಾರ್ ಆರ್ ಹಾಗೂ ಪ್ರಧಾನ ಕಾರ್ಯದರ್ಶಿ ಗಿರೀಶ್ ಗಂಟೇರ್ ರವರು ಹಾಗೂ ಧಾರವಾಡ ಜಿಲ್ಲಾ ಸಮುದಾಯದ ಮುಖಂಡರಾದ ಲಕ್ಷ್ಮಣ್ ಕರಿ, ರಾಮಯ್ಯ ಡೊಕ್ಕಣ್ಣವರ, ಮರಿಯಪ್ಪ ಡೊಕ್ಕಣ್ಣವರ, ಸಣ್ಣ ಯಲ್ಲಪ್ಪ ವಿಭೂತಿ, ಹುಸೇನಪ್ಪ ಕೊಡದಾಳಿ, ರಾಜು ದೊಡ್ಡಮನಿ ಕಲಘಟಗಿ, ಮಡಿವಾಳಪ್ಪ ಕೊಣ್ಣೂರ ಜಿ ಬಸವನಕೊಪ್ಪ, ದುರ್ಗಪ್ಪ ಗಡ್ಡದವರ, ಗಂಗಪ್ಪ ಕೊಣ್ಣೂರ, ಸಂಘದ ಪದಾಧಿಕಾರಿಗಳಾದ ಮಾರುತಿ ವಿಭೂತಿ, ದುರ್ಗಪ್ಪ ಕುಲಾವಿ, ಮರಿಯಪ್ಪ ನಾಗಾರ್ಜುನ ವಿಭೂತಿ,ಹಾಗೂ ಇನ್ನಿತರರು ಇದ್ದರು.



# ಜಂಗಮ ಸಮಾಜದ 60 ಮಕ್ಕಳಿಗೆ ಪ್ರತಿಭಾ ಪುರಸ್ಕಾರ

**ಬೆಳಗಾವಿ ವಾರ್ತೆ ಗದಗ:** ನಗರದ ಮುಳಗುಂದ ನಾಕಾ ಬಳಿಯ ಶ್ರೀ ಕುಮಾರೇಶ್ವರ ಧಾರ್ಮಿಕ ಪಾಠಶಾಲೆಯಲ್ಲಿ ಅಖಿಲ ಭಾರತ ಜಂಗಮ ಸೇವಾ ಸಮಿತಿ ಹಾಗೂ ನರಸಾಪೂರದ ಪಂಚವಟಿ ಧಾರ್ಮಿಕ ಗುರುಕುಲ ಜನಕಲ್ಯಾಣ ಟ್ರಸ್ಟ್ ಸಂಯುಕ್ತಾ ಶ್ರಯದಲ್ಲಿ 2025-26ನೇ ಸಾಲಿನ ಎಸ್ಎಸ್ಎಲ್ಸಿ ಮತ್ತು ಪಿಯುಸಿಯಲ್ಲಿ ಶೇ. 90ಕ್ಕಿಂತ ಹೆಚ್ಚು ಅಂಕಗಳನ್ನು ಪಡೆದ ಜಂಗಮ ಸಮಾಜದ 60 ವಿದ್ಯಾರ್ಥಿ ಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಅಧಿಕ ಮಾಸದ ಅಂಗವಾಗಿ ಜಂಗಮ ಸಮಾ ಜದ 33 ಮಹಿಳೆಯರಿಗೆ ಉಡಿ ತುಂಬು ವ ಸಮಾರಂಭ ರವಿವಾರ ಜರುಗಿತು.

ಗಜೇಂದ್ರಗಡದ ಕಾಲಜ್ಞಾನ ಸ್ವಾಮೀಜಿ ಮಾತನಾಡಿ, ಸಮಾಜದ ಮಕ್ಕಳನ್ನು ಗುರುತಿಸಿ ಅವರನ್ನು ಗೌರವಿಸುವುದು ಉತ್ತಮವಾದ ಕೆಲಸ. ಅವರನ್ನು ಸಮಾಜಕ್ಕೆ ಉತ್ತಮ ವ್ಯಕ್ತಿಯಾಗಿ ನಿರ್ಮಾಣ ಮಾಡುವುದು ಅಖಿಲ ಭಾರತ ಜಂಗಮ ಸೇವಾ ಸಮಿತಿ ಉದ್ದೇಶವಾಗಿದ್ದು, ಎಲ್ಲರೂ ಸೇರಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸೋಣ ಎಂದು ಹೇಳಿದರು.

ಕದಾಂಪೂರ ಹಿರೇಮಠದ ಡಾ. ವೀರಭದ್ರ ಶಿವಾಚಾರ್ಯ ಸ್ವಾಮೀಜಿ ನೇತೃತ್ವ ವಹಿಸಿ ಮಾತನಾಡಿ, ಅಖಿಲ ಭಾರತ ಜಂಗಮ ಸೇವಾ ಸಮಿತಿ ಹಾಗೂ ನರಸಾಪೂರದ ಪಂಚವಟಿ ಧಾರ್ಮಿಕ ಗುರುಕುಲ ಜನಕಲ್ಯಾಣ ಟ್ರಸ್ಟ್ ಸಂಯುಕ್ತಾಶ್ರಯದಲ್ಲಿ ಒಟ್ಟು 5 ಕಾರ್ಯಕ್ರಮಗಳನ್ನು ಮಾಡಲಾಗಿದ್ದು, ಮುಂದಿನ ದಿನಗಳಲ್ಲಿ ಇನ್ನೂ ಹಲವಾರು ಸಮಾರಂಭಗಳನ್ನು ಜಂಟಿಯಾಗಿ ಮಾಡುವ ಯೋಜನೆಗಳಿದ್ದು, ತಮ್ಮ ಸಹಾಯ-ಸಹಕಾರ ತುಂಬಾ



ಉಪಯುಕ್ತವಾಗಿದೆ ಎಂದು ಹೇಳಿದರು.

ಅಖಿಲ ಭಾರತ ಜಂಗಮ ಸೇವಾ ಸಮಿತಿಯ ಅಧ್ಯಕ್ಷ ಪ್ರಭಯ್ಯ ದಂಡಾವತಿ ಮಠ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ವೆಂಕಟಾಪೂರ, ಜಿಗೇರಿಯ ಗುರು ಸಿದ್ದೇಶ್ವರ ಶಿವಾಚಾರ್ಯರು, ಅಡ್ನೂರು-ರಾಜೂರು ಬ್ರಹನ್ಮಠದ ಅಭಿನವ ಪಂಚಾಕ್ಷರ ಶಿವಾಚಾರ್ಯ ಸ್ವಾಮೀಜಿ, ಮಲ್ಲಸಮುದ್ರ ಓಂಕಾರೇಶ್ವರ ಮಠದ ಫಕೀರೇಶ್ವರ ಸ್ವಾಮೀಜಿ, ನರಸಾಪೂರ ವೀರೇಶ್ವರ ಶರಣರ ಮಠದ ಶಿವಕುಮಾರ ಶರಣರು, ಮಹೇಶ್ವರಯ್ಯ ಸ್ವಾಮಿಗಳು ಹೊಸಳ್ಳಿಮಠ ಸಮ್ಮುಖ ವಹಿಸಿದ್ದರು.

# ಡೀಸೆಲ್ ಕೊರತೆ ನೀಗಿಸಲು ಆಗ್ರಹ



**ಬೆಳಗಾವಿ ವಾರ್ತೆ ಲಕ್ಷ್ಮೇಶ್ವರ:** ಪಟ್ಟಣ ಸೇರಿದಂತೆ ತಾಲೂಕಿನಾದ್ಯಂತ ಇರುವ ಪೆಟ್ರೋಲ್ ಮತ್ತು ಡೀಸೆಲ್ ಬಂಕುಗಳಲ್ಲಿ ಡೀಸೈಲ್ ಅಭಾವ ತಲೆದೋರಿದ್ದು ಬಿತ್ತನೆ ಬೀಜ ಗೊಬ್ಬರಕ್ಕಾಗಿ ಸರದಿ ಸಾಲಿನಲ್ಲಿ ನಿಲ್ಲುತ್ತಿದ್ದ ರೈತರಿಗೆ ಈಗ ಸುಗ್ಗಿಯ ಹಂಗಾಮಿನಲ್ಲಿ ಮೊದಲ ತುತ್ತಿಗೆ ಹಳ್ಳು ಎಂಬಂತೆ ಡಿಸೈಲ್ ಕೊರತೆ ರೈತರನ್ನು ಕಂಗಾಲಾಗಿಸಿದೆ.

ಈಗ ರೈತರಿಗೆ ಡಿಸೈಲ್ ಸಾಕಷ್ಟು ಪ್ರಮಾಣದಲ್ಲಿ ಬೇಕಾಗಿದ್ದು ಜಮೀನುಗಳನ್ನು ಉಳಿಮೆ ಮಾಡಲು ಬಿತ್ತಲು ರಂಟೆ ಹೊಡೆಯಲು ಯಾಂತ್ರಿಕೃತ ಟ್ರ್ಯಾಕ್ಟರ್ ಗಳನ್ನು ಬಳಸುತ್ತಿರುವುದರಿಂದ ಕನಿಷ್ಠ ಒಬ್ಬ ರೈತರಿಗೆ ಒಂದು ಟ್ರ್ಯಾಕ್ಟರ್ ಗೆ 25 ರಿಂದ 50 ಲೀಟರ್ ಡೀಸೆಲ್ ಬೇಕಾಗಿದೆ.

ಆದರೆ ಯಾವ ಪೆಟ್ರೋಲ್ ಬಂಕುಗಳಲ್ಲೂ ಡಿಸಲ್ ಲಭ್ಯವಾಗದಿರುವುದರಿಂದ ರೈತರು 25 ಲೀಟರ್ ಕ್ಯಾನುಗಳನ್ನು ಹಿಡಿದುಕೊಂಡು ಮತ್ತು ಪಾಳೆಕೆ ನಿಂತಿರುವ ದೃಶ್ಯ ಎಲ್ಲೆಡೆ ಕಂಡುಬರುತ್ತದೆ.

ಆದರೆ ತಾಲೂಕ ಆಡಳಿತ ಪೆಟ್ರೋಲ್ ಮತ್ತು ಡೀಸೆಲ್ ಬಂಕುಗಳಲ್ಲಿ ಮಧ್ಯ ಪ್ರವೇಶ ಮಾಡಿ ಡೀಸೆಲ್ ಕೊರತೆಗೆ ಕಾರಣವನ್ನು ಹುಡುಕಿ ರೈತರಿಗೆ ಲಭ್ಯವಾಗುವಂತೆ ಮಾಡುವ ಅವಶ್ಯಕತೆ ಇದೆ.

ಈ ಕುರಿತು ರೈತ ರಮೇಶ್ ಲಮಾಣಿ ಅವರು ಸುಗ್ಗಿಯ ಹಂಗಾಮಿನಲ್ಲಿ ಡೀಸೆಲ್ ಕೊರತೆ ರೈತರ ಬಿತ್ತನೆಗೆ ಹಿನ್ನಡೆ ಉಂಟಾಗುತ್ತಿದೆ ಕೂಡಲೇ ಬಂಕುಗಳ ಮಾಲೀಕರ ಸಭೆ ಕರೆದು ತಾಲೂಕ ಆಡಳಿತ ರೈತರಿಗೆ ಸಾಕಷ್ಟು ಪ್ರಮಾಣದಲ್ಲಿ ಡಿಸೈಲ್ ದೊರೆಯುವಂತೆ ಮಾಡಬೇಕು ಎಂದು ಒತ್ತಾಯಿಸಿದ್ದಾರೆ.

ಕಾಂಗ್ರೆಸ್ ಮುಖಂಡ ಪದ್ಮರಾಜು ಗೌಡ ಪಾಟೀಲ್ ಅವರು ಪ್ರತಿಕ್ರಿಯೆ ನೀಡಿ ಪ್ರಧಾನಮಂತ್ರಿ ನರೇಂದ್ರ ಮೋದಿಯವರು ರೈತರ ಆದಾಯವನ್ನು ದ್ವಿಗುಣಗೊಳಿಸುವದಾಗಿ ಹೇಳಿದ್ದರು. ಕೇಂದ್ರ ಸರ್ಕಾರಕ್ಕೆ ನಿಜವಾಗಲೂ ರೈತರ ಬಗ್ಗೆ ಕಾಳಜಿ ಇದ್ದರೆ ಎಂತದೇ ಪರಿಸ್ಥಿತಿಯಲ್ಲೂ ಬೆಲೆಯನ್ನು ತಗ್ಗಿಸಿ ಕೂಡಲೇ ರೈತರಿಗೆ ಲಭ್ಯವಾಗುವಂತೆ ಮಾಡಬೇಕು ಎಂದು ಒತ್ತಾಯಿಸಿದ್ದಾರೆ.

# ಪುರಾಣಗಳ ರಾಜ ಶ್ರೀಮದ್ ಭಾಗವತ



**ಬೆಳಗಾವಿ ವಾರ್ತೆ ಸತ್ತೂರು:** ಭಗವಂತನಿಗೆ ಸಂಬಂಧಿಸಿದ ವಿಷಯಗಳನ್ನು ಸಮಗ್ರವಾಗಿ ಸಾಂದ್ರ– ಸುಂದರವಾಗಿ ನಿರೂಪಿಸುವ ಗ್ರಂಥ ಶ್ರೀಮದ್ ಭಾಗವತ. ಇದು ಎಲ್ಲ ಪುರಾಣಗಳ ಸಾರ, ಸಂಗ್ರಹ. ಆದ್ದರಿಂದಲೇ ಇದು ಸಮಸ್ತ ಪುರಾಣಗಳ ರಾಜ ವಿಶೇಷವಾಗಿ ಜ್ಞಾನ, ಭಕ್ತಿ, ವೈರಾಗ್ಯ ತೋರುವ ಮತ್ತು ಭಗವಂತನ ಉಪಾಸನೆಗಳನ್ನು ಮನಮುಟ್ಟುವಂತೆ ಬೋಧಿಸುವ ಗ್ರಂಥ ಎಂಬುದು ಇದರ ಹೆಗ್ಗಳಿಕೆ ಎಂದು ಹಿರಿಯ ವಿದ್ವಾಂಸರಾದ ಡಾ. ಪಂ. ನಾರಾಯಣ ಆಚಾರ್ಯ ಧೂಳ್ಕೇಡ ತಿಳಿಸಿದರು.

ಸತ್ತೂರಿನ ನಾರಾಯಣ ಪಾರಾಯಣ ಬಳಗದ ಆಶ್ರಯದಲ್ಲಿ ಜರುಗಿದ ಮೊದಲನೆಯ ಭಾಗವತ ಸಪ್ತಾಹದ ಮಂಗಲೋತ್ಸವದಲ್ಲಿ ಭಾಗವಹಿಸಿ ಮಾತನಾಡುತ್ತಾ, ವಿಶೇಷವಾಗಿ ಅಧಿಕ ಮಾಸದಲ್ಲಿ ಈ ಗ್ರಂಥದ ಪಠಣ, ಪಾರಾಯಣ, ಶ್ರವಣಗಳಿಗೆ ಮಹತ್ತರವಾದ ಫಲವಿದೆ ಎಂದು ಮಾಸ ಮಹಾತ್ಮೆಯಲ್ಲಿ ಹೇಳಲಾಗಿದೆ. ಈ ಗ್ರಂಥದ ಶ್ರವಣದಿಂದ ನಮ್ಮ ಬದುಕಿನ ಮಹಾಭಾಗ್ಯ ತೆರೆಯುತ್ತದೆ ಎಂದು ಸುಂದರವಾಗಿ ಲೌಕಿಕ ಉದಾಹರಣೆಗಳೊಂದಿಗೆ ವಿವರಿಸಿದರು.

ಕಾರ್ಯಕ್ರಮದ ಪೂರ್ವದಲ್ಲಿ ಬಳಗದ ಸದಸ್ಯರಿಂದ ಶ್ರೀ ಹರಿವಾಯು ಗುರುಗಳ ಸ್ತೋತ್ರಗಳ ಪಾರಾಯಣ ಮತ್ತು ಶ್ರೀ ಪಾಂಡುರಂಗ ಕುಲಕರ್ಣಿವರಿಂದ ದಾಸವಾಣಿ ಕಾರ್ಯಕ್ರಮ ಜರುಗಿತು.

ಕಾರ್ಯಕ್ರಮದಲ್ಲಿ ರಘೋತ್ತಮ ಅವಧಾನಿ, ಕೃಷ್ಣ ಹುನಗುಂದ, ಶ್ರೀನಿವಾಸ, ಪಟ್ಟಣಕೋಡಿ, ಎಲ್ ವಿ ಜೋಶಿ, ಡಾ. ರವಿ ಧುಮ್ಮವಾಡ, ಡಾ. ಗಿರೀಶ ಕುಲಕರ್ಣಿ, ಧೀರೇಂದ್ರ ತಂಗೋಡ, ಪ್ರಕಾಶ ದೇಸಾಯಿ, ಪ್ರಶಾಂತ ದೇಶಪಾಂಡೆ, ಸಂಜೀವ ಜೋಶಿ, ಬಿಜಾಪುರ, ವಿಠ್ಠಲ ಅಂಬೇಕರ, ಆನಂದ ದೇಶಪಾಂಡೆ, ಲಕ್ಷ್ಮೇಶ್ವರ ಬಹದ್ದೂರ್ ದೇಸಾಯಿ, ಗುರುನಾಥ ಸರ್ದೇಶ್ಮುಖ, ಮುಂತಾದ ಕುಟುಂಬ ಸದಸ್ಯರು ಉಪಸ್ಥಿತರಿದ್ದರು.

# ಮೌಲ್ಯಾಧಾರಿತ ಬದುಕಿಗೆ ಶರಣರ ಸಂದೇಶಗಳೇ ದಾರಿದೀಪ :ವ್ಹಿ.ಸಿ.ನಾಗಠಾಣ



**ಬೆಳಗಾವಿ ವಾರ್ತೆ ವಿಜಯಪುರ:** ವಿಜಯಪುರ ಶರಣರ, ಸಂತರ ನಾಡು. ಸಂಸ್ಕೃತಿ, ಸಂಸ್ಕಾರ ಆಚಾರ–ವಿಚಾರಗಳು ನಮ್ಮ ಈ ಮಣ್ಣಿನ ಗುಣ ಧರ್ಮದಲ್ಲಿಯೇ ಅಡಗಿವೆ. 12ನೇ ಶತಮಾನದ ಶರಣರ ಸಂದೇಶಗಳು ಸಮಾನತೆ, ಕಾಯಕನಿಷ್ಠೆ ಮತ್ತು ಮಾನವೀಯತೆಯ ಮೇಲೆ ಆಧಾರಿತವಾಗಿದ್ದು, ಜಾತಿ ಬೇಧವಿಲ್ಲದೇ ಪ್ರತಿಯೊಬ್ಬರಿಗೂ ಸಮಾನ ಅವಕಾಶವಿರುವ ಸಮಾಜ ನಿರ್ಮಾಣವೇ ಅವರ ಮುಖ್ಯ ಗುರಿಯಾಗಿತ್ತು. ಇಂದು ನಾವೆಲ್ಲರೂ ಮೌಲ್ಯಾಧಾರಿತ ಬದುಕನ್ನು ನಡೆಸಲು ಶರಣರ ಸಂದೇಶಗಳೇ ದಾರಿದೀಪವಾಗಿವೆ ಎಂದು ವಿಜಯಪುರ ಅಖಿಲ ಭಾರತ ವೀರಶೈವ ಮಹಾಸಭಾದ ಜಿಲ್ಲಾಧ್ಯಕ್ಷ ವ್ಹಿ.ಸಿ.ನಾಗಠಾಣ ಅಭಿಪ್ರಾಯಪಟ್ಟರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಸಭಾಂಗಣದಲ್ಲಿ ಜರುಗಿದ ಲಿಂ. ಬಸವರಾಜ ಪರಪ್ಪ ಆಲೂರ ದತ್ತಿ. ದಿ.ವೈ.ಎಸ್.ವಿ ಸೂರ್ಯನಾರಾಯಣ ದತ್ತಿ ಹಾಗೂ ಲಿಂ. ಮಾತೋಶ್ರೀ ಗುರವ್ವ ಶಿವಲಿಂಗಪ್ಪ ಹೊರಟ್ಟಿ ದತ್ತಿನಿಧಿಗೋಷ್ಠಿಗಳನ್ನು ಉದ್ಘಾಟಿಸಿ ಮಾತನಾಡಿದ ಅವರು ಜಿಲ್ಲೆಯಲ್ಲಿ ಕನ್ನಡ ಸಾಹಿತ್ಯ ಪರಿಷತ್ತು ದತ್ತಿದಾನಿಗಳು ತಮ್ಮ ಹಿರಿಯರ ಸ್ಮರಣೆಗೋಸ್ಕರ ಇಟ್ಟಿರುವ ದತ್ತಿಗಳಿಗೆ ನ್ಯಾಯ ನೀಡುವ ಪ್ರಾಮಾಣಿಕ ಪ್ರಯತ್ನ ಮಾಡುವ ಮೂಲಕ ಸಾಹಿತ್ಯಕ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳನ್ನು ಕೈಕೊಂಡು ಇಡೀ ಕನ್ನಡ ನಾಡಿನಲ್ಲಿಯೇ ನಮ್ಮ ಜಿಲ್ಲೆ ದತ್ತಿನಿಧಿಯಲ್ಲಿ ಎರಡನೇ ಸ್ಥಾನ ಪಡೆಯುವ ಮೂಲಕ ಬಹುದೊಡ್ಡ ಕೊಡುಗೆ ನೀಡಿದ್ದು, ದತ್ತಿಗೋಷ್ಠಿಗಳ ಮೂಲಕ ಶರಣರ ಸಂದೇಶಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳೋಣ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ವಿಜಯಪುರದ ಸಾಯಿ ಸಕ್ಸೆಸ್ ಫೌಂಡೇಶನ್ ಸಂಸ್ಥಾಪಕ ಅಧ್ಯಕ್ಷೆ ಕಲ್ಪನಾ ಶಾಬಾದಿ ಮಾತನಾಡಿ ಶರಣರ ಸಂದೇಶಗಳು ನಮ್ಮೆಲ್ಲರ ಬಾಳಿಗೆ ಬೆಳಕಾಗಿ ನಿಲ್ಲಬಲ್ಲ ಅನೇಕ ದಿಕ್ಸೂಚಿಯಾದ ವಚನಗಳಲ್ಲಿ ಸಾಮಾಜಿಕ ಮತ್ತು ಮಾನವೀಯ ಮೌಲ್ಯಗಳಿದ್ದು ಅದರ ಸಂದೇಶಗಳನ್ನು ಅರಿತು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳೋಣ ಎಂದರು.

"ಬಸವಣ್ಣನವರ ವಚನಗಳಲ್ಲಿನ ಸಂದೇಶಗಳು" ಎಂಬ ವಿಷಯದ ಕುರಿತು ಎಕ್ಸಲೆಂಟ್ ಪದವಿಪೂರ್ವ ಕಾಲೇಜಿನ ಕನ್ನಡ ಪ್ರಾಧ್ಯಾಪಕ ಶರಣಗೌಡ ಪಾಟೀಲ ವಿಶೇಷ ಉಪನ್ಯಾಸ ನೀಡುತ್ತ ಮಾತನಾಡಿ, ಬಸವಣ್ಣನವ ವಚನಗಳಲ್ಲಿ ಮಾನವೀಯ ಮೌಲ್ಯಗಳಿದ್ದು, ಸಮಾನತೆ ಮತ್ತು ನ?ತಿಕತೆಯ ತಳಹದಿಯ ಮೇಲೆ ಯಾವುದೇ ಜಾತಿ ಧರ್ಮಕ್ಕೆ ಸೀಮಿತವಾಗಿರದೇ ಇಡೀ ವಿಶ್ವಕ್ಕೆ ಸಾರ್ವಕಾಲಿಕ ಸಂದೇಶಗಳನ್ನು ನೀಡುವ ವಚನಗಳಿದ್ದು, ಅಂತಹ ಅನೇಕ ವಚನಗಳನ್ನು ಹಲವಾರು ದೃಷ್ಟಾಂತ ಹಾಗೂ ನಿದರ್ಶನಗಳೊಂದಿಗೆ ಮಾರ್ಮಿಕವಾಗಿ ವಿವರಿಸಿದರು.

"ಬಸವಣ್ಣನವರ ಸಮಕಾಲೀನ ಶರಣರ ಕುರಿತು ಚಿಂತನೆ" ಎಂಬ ವಿಷಯದ ಕುರಿತು ವಿಶೇಷ ಉಪನ್ಯಾಸ ನೀಡಿದ ಹೊನವಾಡದ ಶಿಕ್ಷಕಿ, ಸಾಹಿತಿ ಶರಣಮ್ಮ ಹಾದಿಮನಿ ಮಾತನಾಡಿ,ಬಸವಣ್ಣನ ಸಮಕಾಲೀನ ವಚನಕಾರರಾದ ಅಲ್ಲಮಪ್ರಭು, ಅಕ್ಕಮಹಾದೇವಿ, ಆಯ್ದಕ್ಕಿ ಮಾರಯ್ಯ– ಆಯ್ದಕ್ಕಿ ಲಕ್ಕಮ್ಮ, ಜೇಡರ ದಾಸಿಮಯ್ಯ, ಮಡಿವಾಳ ಮಾಚಿದೇವ, ಚನ್ನಬಸವಣ್ಣ, ಅಂಬಿಗೇರ ಚೌಡಯ್ಯ. ಸೂಳೆ ಸಂಕವ್ವೆ, ಹಡಪದ ಅಪ್ಪಣ್ಣ, ಶರಣೆ ಲಿಂಗಮ್ಮ ಹೀಗೆ ಅನೇಕ ಶರಣ–ಶರಣೆಯರು ಈ ಸಮಾಜಕ್ಕೆ ನೀಡಿದ ಸಂದೇಶಗಳನ್ನು ಕುರಿತು ಎಳೆಎಳೆಯಾಗಿ ಬಿಚ್ಚಿಟ್ಟರು.

ಕಾರ್ಯಕ್ರಮದ ವೇದಿಕೆಯಲ್ಲಿ ಮುಖ್ಯ ಅತಿಥಿಗಳಾಗಿ ನಂದು ಗಡಗಿ, ಶ್ರೀಶೈಲ ಕನ್ನೂರ, ಕಲ್ಪನಾ ಬಾಬಕರ ಮಾತನಾಡಿದರು.ಶಕುಂತಲಾ ಹಿರೇಮಠ ಪ್ರಾರ್ಥಿಸಿದರು. ಮಹಾದೇವಿ ತೆಲಗಿ ಸ್ವಾಗತಿಸಿ ಗೌರವಿಸಿದರು. ಗೌರವ ಕಾರ್ಯದರ್ಶಿ ಡಾ.ಮಾಧವ ಗುಡಿ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಶಶಿಕಲಾ ನಾಯ್ಕೋಡಿ ಗೀತಗಾಯನ ಮಾಡಿದರು. ಯಮನಪ್ಪ ಪವಾರ ನಿರೂಪಿಸಿದರು. ಪರವೀನ ಶೇಖ ವಂದಿಸಿದರು. ಕಾರ್ಯಕ್ರಮದಲ್ಲಿ ಜಿಲ್ಲಾಧ್ಯಕ್ಷ ಹಾಸಿಂಪೀರ ವಾಲೀಕಾರ, ಕೋಶಾಧ್ಯಕ್ಷ ಅಭಿಷೇಕ ಚಕ್ರವರ್ತಿ, ವಿಜಯಲಕ್ಷ್ಮಿ ಹಳಕಟ್ಟಿ, ಜಿ.ಎಸ್.ಬಳ್ಳೂರ, ಸಿದ್ದಣ್ಣ ಸಾತಲಗಾಂವ, ಟಿ. ಆರ್, ಹಾವಿನಾಳ, ಬಿ.ಕೆ. ಗೋಟ್ಯಾಳ, ಅಂಬಾದಾಸ ಜೋಶಿ, ಡಾ.ಕೆ. ಬಿ.ಹಿರೇಮಠ, ಬಿ.ಎಸ್.ಕೋನರೆಡ್ಡಿ, ಅರ್ಜುನ ಶಿರೂರ, ಬಸವರಾಜ ಬಿರಾದಾರ, ಸಿದ್ದು ಮಾನೆ, ಎಂ.ಎಸ್ ಬಗಲಿ, ಶ್ರೀಕಾಂತ ನಾಡಗೌಡ, ಬಿ.ವಿ. ಪಟ್ಟಣಶೆಟ್ಟಿ, ಎಂ.ಆರ್ ಬಡಿಗೇರ, ಎ.ವಿ. ಜಹಾಗೀರದಾರ, ತ್ರಿವೇಣಿ ಬುರ್ಲಿ, ಎ.ಎಂ.ಹಳ್ಳೂರ, ಫಕ್ರುದ್ದೀನ್ ಅಲಿಅಹ್ಮದ ಹಿರೇಕೊಪ್ಪ, ಸಿದ್ದು ಬೀಳಗಿ, ಎಸ್.ಎನ್ ಪೋಳ, ಎಂ. ಎಸ್ ಕನ್ನೂರ, ನಿಖಿಲ ವಾಲಿಕಾರ, ಪಿ.ಎಂ.ಭಾವಿಕಟ್ಟಿ, ವಿರೇಶ ಕನ್ನೂರ,ಆರ್.ಎಚ್ ಹುಣಸಿಗಿಡದ, ಆರ್.ಆರ್ ಮದರಳ್ಳಿ, ಬಸವರಾಜ ಹಿರೇಮಠ ಚಂದ್ರಶೇಖರ ಸರೂರ, ಶಿವಾಜಿ ಮೋರೆ ಮುಂತಾದವರು ಉಪಸ್ಥಿತರಿದ್ದರು.

# ಮುಸಲಾಪೂರದಲ್ಲಿ ರಾಷ್ಟ್ರೀಯ ಹಾವು ಕಡಿತ ನಿಯಂತ್ರಣ ಜಾಗೃತಿ ಕಾರ್ಯಕ್ರಮ



**ಬೆಳಗಾವಿ ವಾರ್ತೆ ಕೊಪ್ಪಳ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಇಲಾಖೆ, ಜಿಲ್ಲಾ ಸರ್ವೇಕ್ಷಣಾಧಿಕಾರಿಗಳ ಘಟಕ, ಕೊಪ್ಪಳ, ಪ್ರಾಥಮಿಕ ಆರೋಗ್ಯ ಕೇಂದ್ರ ಮುಸಲಾಪೂರ ಇವರ ಸಂಯುಕ್ತಾಶ್ರಯದಲ್ಲಿ ಮೇ 22 ರಂದು ಮುಸಲಾಪೂರ ಗ್ರಾಮದಲ್ಲಿ "ರಾಷ್ಟ್ರೀಯ ಹಾವು ಕಡಿತ ನಿಯಂತ್ರಣ ಜಾಗೃತಿ" ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳಾದ ದೇವಮ್ಮ ಅವರು ಮಾತನಾಡಿ, ಹಾವು ಕಡಿತದಿಂದ ಉಂಟಾಗುವ ಮರಣವನ್ನು ನಿಯಂತ್ರಿಸುವ ಕುರಿತು ಸಾರ್ವಜನಿಕರಿಗೆ ಅರಿವು ಮೂಡಿಸುವುದು ಈ ಕಾರ್ಯಕ್ರಮದ ಉದ್ದೇಶವಾಗಿದೆ. ಭಾರತ ಹಳ್ಳಿಗಳ ದೇಶ ಶೇ. 70ಕ್ಕಿಂತಲೂ ಹೆಚ್ಚು ಜನರು ಕೃಷಿಯಲ್ಲಿ ಅವಲಂಬಿತರಾಗಿದ್ದಾರೆ. ಭಾರತದಲ್ಲಿ ಪ್ರಮುಖ 4 ವಿಷಕಾರಿ ಹಾವುಗಳಾದ ನಾಗರಹಾವು, ಕಟ್ಟಾವು, ಕೊಳಕುಮಂಡಲ ಹಾವು ಹಾಗೂ ಗರಗಸ ಮಂಡಲ ಹಾವು ಕಡಿತದಿಂದ ಉಂಟಾಗುವ ಸಾವುಗಳಲ್ಲಿ 90% ಅಧಿಕ ಸಾವುಗಳಿಗೆ ಕಾರಣವಾಗುತ್ತವೆ. ಹಾಗಾಗಿ ಈ 4 ಹಾವುಗಳ ಬಗ್ಗೆ ಎಚ್ಚರಿಗೆ ವಹಿಸಬೇಕು ಎಂದರು.

ನಾಗರಹಾವು ಬಿಟ್ಟು ಉಳಿತ 3 ವಿಷಕಾರಿ ಹಾವುಗಳು ರಾತ್ರಿವೇಳೆ ಹೆಚ್ಚು ಚಟುವಟಿಕೆಯಿಂದಿರುತ್ತವೆ. ಹಾಗಾಗಿ ರಾತ್ರಿವೇಳೆ ಹೊರಗಡೆ ಹೋಗುವಾಗ ಟಾರ್ಚ್ ಬಳಸಬೇಕು. ಮನೆ ಅಂಗಳವನ್ನು ಇಲಿ ಹೆಗ್ಗನಗಳಂತಹ ಹಾವುಗಳು ತಿನ್ನುವ ಜೀವಿಗಳಿಂದ ಮುಕ್ತವಾಗಿಸುವುದು. ಮನೆಯಂಗಳ ಅಥವಾ ಹೊಲಗದ್ದೆಗಳಲ್ಲಿ ಸಾಮಾನ್ಯವಾಗಿ ತಿರುಗಾಡುವ ಸ್ಥಳಗಳಲ್ಲಿ ಗಿಡಗಂಟಿಗಳನ್ನು ಕಡಿದು ಸ್ವಚ್ಚವಾಗಿಟ್ಟುಕೊಳ್ಳಬೇಕು. ಹಾವುಗಳಿರುವ ಸಾಧ್ಯತೆ ಹೆಚ್ಚಿರುವ ಸ್ಥಳಗಳಲ್ಲಿ ಕೆಲಸ ಮಾಡುವಾಗ ಶೂಗಳನ್ನು ಬಳಕೆ ಮಾಡಬೇಕು. ರಾತ್ರಿ ಮನೆಯ ಹೊರಗೆ ಹಾಗೂ ಹೊಲಗದ್ದೆಗಳಲ್ಲಿ ಮಲಗಬೇಕಾದಾಗ ನೆಲದಲ್ಲಿ ಮಲಗದೆ ಎತ್ತರ ಪ್ರದೇಶದ ಮಂಚ ಬಳಸುವುದು, ನೆಲದಲ್ಲಿ ಮಲಗಲೇ ಬೇಕೆಂದರೆ ಕಡ್ಡಾಯವಾಗಿ ಸೊಳ್ಳೆಪರದೆ ಬಳಸುವುದು ಹಾಗೂ ರೈತರು ಹೊಲದಲ್ಲಿ ದನ–ಕರಗಳಿಗೆ ಮೇವು ಹಾಗೂ ಹಸಿಹುಲ್ಲು ಕಿಳುವಾಗ ಕುಡುಗೊಲು ಬಳಸಬೇಕು. ಒಂದು ವೇಳೆ ಹಾವು ಕಚ್ಚಿದರೆ ತಕ್ಷಣ ಸಮೀಪದ ಸರ್ಕಾರಿ ಆಸ್ಪತ್ರೆಗೆ 40 ನಿಮಿಷದೊಳಗಾಗಿ ಹೋಗಿ ಚಿಕಿತ್ಸೆ ಪಡೆದುಕೊಳ್ಳಬೇಕು. ಹಾವು ಕಡೆದ ವ್ಯಕ್ತಿಯನ್ನು ಸಮಾದಾನ ಪಡಿಸಿ, ಗಾಬರಿ ಪಡಿಸಬೇಡಿ. ಹಾವಿನಿಂದ ನಿಧಾನವಾಗಿ ದೂರ ಸರಿಯಿರಿ. ರಕ್ತಬಂಧಕಪಟ್ಟಿ ಕಟ್ಟಬೇಡಿ. ಹಾವು ಕಡಿತಕ್ಕೊಳಗಾದ ವ್ಯಕ್ತಿಯನ್ನು ಎಡಭಾಗಕ್ಕೆ ಮಲಗಿಸಿ ಕಚ್ಚಿದ ಭಾಗವನ್ನು ಅಲುಗಾಡದಂತೆ ನೋಡಿಕೊಳ್ಳಿ. ಗಾಯವನ್ನು ಕತ್ತರಿಸಬೇಡಿ, ಏನನ್ನು ಹಚ್ಚಬೇಡಿ. ಹಾವು ಕಚ್ಚಿದ ವ್ಯಕ್ತಿಗೆ ಆಸ್ಪತ್ರೆಯಲ್ಲಿಯೇ ಚಿಕಿತ್ಸೆ ಕೊಡಿಸಿ. ನಾಟಿ ಔಷಧ ಅಥವಾ ಅಸುರಕ್ಷಿತ ಚಿಕಿತ್ಸಾ ಪದ್ದತಿಯನ್ನು ಅವಲಂಬಿಸಬೇಡಿ. ಒಟ್ಟಾರೆಯಾಗಿ ಪ್ರತಿಯೊಬ್ಬರೂ ತಮ್ಮ ತಮ್ಮ ಮನೆಯ ಸುತ್ತ–ಮುತ್ತಲಿನ ಪ್ರದೇಶ ಸ್ವಚ್ಛತೆಯಿಂದ ಇಟ್ಟುಕೊಂಡು ಇದರ ಬಗ್ಗೆ ಇತರರಿಗೂ ಮಾಹಿತಿ ನೀಡಿ, ಜಾಗೃತರಾಗಬೇಕೆಂದು ತಿಳಿಸಿದರು.

ಮುಸಲಾಪೂರ ಪ್ರಾಥಮಿಕ ಆರೋಗ್ಯ ಕೇಂದದ್ರ ವೈದ್ಯಾಧಿಕಾರಿಗಳಾದ ಡಾ. ಅಂಜುಮತಾಜ್ ಅವರು ಮಾತನಾಡಿ, ರೇಬೀಸ್ ವೈರಸ್ ಸೋಂಕಿತ ಪ್ರಾಣಿಗಳು ಮನುಷ್ಯರಿಗೆ ಕಚ್ಚುವುದರಿಂದ ಹರಡುತ್ತದೆ. ಹೆಚ್ಚು ಪ್ರಮಾಣದಲ್ಲಿ ಬೀದಿನಾಯಿಗಳ ಕಡಿತದಿಂದ ಸಂಬಂಧಿಸುತ್ತದೆ. ಒಂದುವೇಳೆ ನಾಯಿ ಕಚ್ಚಿದರೆ, ಕಚ್ಚಿದ ಜಾಗವನ್ನು ಸೋಪು ಮತ್ತು ಶುದ್ದ ಹರಿಯುವ ನಲ್ಲಿ(ನಳ) ನೀರಿನಲ್ಲಿ 15 ನಿಮೀಷ ತೊಳೆಯಬೇಕು. ಕಚ್ಚಿದ ಜಾಗಕ್ಕೆ ಸ್ಥಳೀಯವಾಗಿ ಲಭ್ಯವಿರುವ ನಂಜು ನಿರೋಧಕ ಔಷಧಿ ಲಭ್ಯವಿದ್ದರೆ ಹಚ್ಚಿರಿ. ಕಚ್ಚಿದ ಜಾಗವನ್ನು ಬ್ಯಾಂಡೇಜ್ ಅಥವಾ ಯಾವುದೇ ರೀತಿಯ ಬಟ್ಟೆಯಿಂದ ಮುಚ್ಚಬೇಡಿ. ಕಚ್ಚಿದ ಜಾಗಕ್ಕೆ ಕೇಸರು ಅಥವಾ ಹಸುವಿನ ಸಗಣೆ, ಕಾಫಿಪುಡಿ, ಮೆಣಸಿನಪುಡಿ, ಸುಣ್ಣ ಅಥವಾ ಇತರೆ ಯವುದೇ ಕಿರಿ–ಕಿರಿ ಉಂಟುಮಾಡುವ ಪದಾರ್ಥ ಹಚ್ಚಬೇಡಿ. ಎಲ್ಲಾ ನಾಯಿಗಳಿಗೆ ಪಶು ಸಂಗೋಪನಾ ಇಲಾಖೆಯಿಂದ ನೀಡುವ ಚುಚ್ಚುಮದ್ದನ್ನು ತಪ್ಪದೇ ಹಾಕಿಸಬೇಕು. ನಾಯಿ ಅಥವಾ ಯಾವುದೇ ಪ್ರಾಣಿ ಕಡಿತವಾದಲ್ಲಿ ತಕ್ಷಣ ನಿಮ್ಮ ಹತ್ತಿರದ ಸಮುದಾಯ ಆರೋಗ್ಯ ಕೇಂದ್ರ, ಪ್ರಾಥಮಿಕ ಆರೋಗ್ಯ ಕೇಂದ್ರ, ಸಾರ್ವಜನಿಕ ಆಸ್ಪತ್ರೆ, ಜಿಲ್ಲಾ ಆಸ್ಪತ್ರೆ ಅಥವಾ ಸರ್ಕಾರಿ ವೈದ್ಯಕೀಯ ಮಹಾವಿದ್ಯಾಲಯಕ್ಕೆ ಭೇಟಿ ನೀಡಿಬೇಕು. ನಾಯಿ ಕಡಿತದ ಬಗ್ಗೆ ಯಾವುದೇ ಕಾರಣಕ್ಕೂ ನಿರ್ಲಕ್ಷ್ಯ ಮಾಡಬಾ ರದು ಹಾಗೂ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ರೇಬೀಸ್ ತಡೆಗಟ್ಟುವ ಲಸಿಕೆ(ಎ.ಆರ್.ವಿ) ಮತ್ತು ರೇಬಿಸ್ ಇಮ್ಯುನೊ ಗ್ಲೋಬ್ಯುಲಿನ್(ಆರ್.ಐ.ಜಿ) ಚಿಕಿತ್ಸೆ ಉಚಿತವಾಗಿರುತ್ತದೆ ಎಂದು ಹೇಳಿದರು.

ಈ ಕಾರ್ಯಕ್ರಮದಲ್ಲಿ ಪ್ರಥಮ ದರ್ಜೆ ಸಹಾಯಕರಾದ ವೀರುಪಾಕ್ಷಿ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಶಿವಕುಮಾರ, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿಗಳಾದ ಯಾಸ್ಮಿನ್, ಆಶಾ ಕಾರ್ಯಕರ್ತೆಯರು, ಗ್ರಾಮದ ನಾಗರಿಕರು, ಗರ್ಭಿಣಿ ಬಾಣಂತಿಯರು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಮಕ್ಕಳ ಮೇಲಿನ ದೌರ್ಜನ್ಯ ತಡೆ: ಹಿಟ್ನಾಳ ಗ್ರಾಮದಲ್ಲಿ ಜನಸಂಪರ್ಕ ಸಂವಾದ ಕಾರ್ಯಕ್ರಮ




**ಬೆಳಗಾವಿ ವಾರ್ತೆ ಕೊಪ್ಪಳ:** ಜಿಲ್ಲಾಡಳಿತ, ಜಿಲ್ಲಾ ಪೋಲಿಸ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಕೊಪ್ಪಳ ಮತ್ತು ಹಿಟ್ನಾಳ ಗ್ರಾಮ ಪಂಚಾಯತ್ ಇವರುಗಳ ಸಂಯುಕ್ತಾಶ್ರಯದಲ್ಲಿ ಇತ್ತೀಚೆಗೆ ಹಿಟ್ನಾಳ ಗ್ರಾಮದಲ್ಲಿ "ಮಕ್ಕಳ ಮೇಲಿನ ದೌರ್ಜನ್ಯ ತಡೆಗಾಗಿ ಜನಸಂಪರ್ಕ ಸಂವಾದ ಕಾರ್ಯಕ್ರಮ" ಜರುಗಿತು.

ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಮಾಜ ಕಾರ್ಯಕರ್ತೆ ಪ್ರತಿಭಾ ಕಾಶಿಮಠ ಅವರು ಮಾತನಾಡಿ, ಇತ್ತೀಚೆಗೆ ಮಕ್ಕಳು ಮಾಧ್ಯಮಗಳ ಪ್ರಭಾವದಿಂದ ಪ್ರೀತಿ, ಪ್ರೇಮದ ಹೆಸರಿನಲ್ಲಿ ತಿಳಿದೊ, ತಿಳಿಯದೆಯೋ ಈ ಕಾಯ್ದೆಯಲ್ಲಿ ಸಿಲುಕುತ್ತಿದ್ದಾರೆ. ಅಲ್ಲದೇ ಅಪ್ರಾಪ್ತ ವಯಸ್ಸಿನ ಮಕ್ಕಳಿಗೆ ಮದುವೆಯನ್ನು ಮಾಡಿದಂತವರು, ಭಾಗಿಯಾದವರು, ಪ್ರೋತ್ಸಾಹಿಸಿದವರು ಬಾಲ್ಯವಿವಾಹ ನಿಷೇಧ ಕಾಯ್ದೆ ಮತ್ತು ಈ ಕಾಯ್ದೆಯಲ್ಲಿ ಸಿಲುಕಿ ಜೈಲು ಶಿಕ್ಷೆಯನ್ನು ಅನುಭವಿಸುತ್ತಿದ್ದಾರೆ. ತಾಯಿ ಮರಣ, ಶಿಶು ಮರಣ, ಅಪೌಷ್ಠಿಕ ಮಕ್ಕಳ ಜನನ ನಿರ್ಮೂಲನೆಗಾಗಿ ಸರಕಾರವು ಬಾಲ್ಯವಿವಾಹ ನಿಷೇಧ ಕಾಯ್ದೆಯನ್ನು ಜಾರಿಗೊಳಿಸಿದೆ. ಅದರನ್ವಯ 18 ವರ್ಷದೊಳಿನ ಹೆಣ್ಣು ಮಗುವಿಗೆ ಮತ್ತು 21 ವರ್ಷದೊಳಗಿನ ಗಂಡು ಮಗುವಿಗೆ ವಿವಾಹವನ್ನು ಮಾಡುವುದನ್ನು ನಿಷೇಧಿಸಿದೆ ಎಂದರು.

ರಾಜ್ಯವನ್ನು ಬಾಲ್ಯವಿವಾಹ ಮುಕ್ತ ರಾಜ್ಯವನ್ನಾಗಿಸಲು ಕರ್ನಾಟಕ ರಾಜ್ಯ ಸರಕಾರವು ಕರ್ನಾಟಕ ತಿದ್ದುಪಡಿಯನ್ನು ತಂದಿದ್ದು, ಅದರನ್ವಯ ರಾಜ್ಯದಲ್ಲಿ ಬಾಲ್ಯವಿವಾಹಗಳು ಅಸಿಂಧು ವಿವಾಹಗಳಾಗಿವೆ. ಬಾಲ್ಯವಿವಾಹವನ್ನು ಮಾಡುವವರು, ಭಾಗವಹಿಸುವವರು, ಆಯೋಜಿಸುವವರು ಎಲ್ಲರಿಗೂ ಕನಿಷ್ಠ 1 ವರ್ಷದಿಂದ 2 ವರ್ಷಗಳವರೆಗೆ ಜೈಲು ಶಿಕ್ಷೆಯನ್ನು ವಿಧಿಸಬಹುದಾಗಿದೆ. ಆದ್ದರಿಂದ ಬಾಲ್ಯವಿವಾಹಗಳನ್ನು ಮಾಡಬೇಡಿ, ಬಾಲ್ಯವಿವಾಹ ಮುಕ್ತ ಜಿಲ್ಲೆಯನ್ನಾಗಿಸಲು ಸಹಕರಿಸಿ ಎಂದು ತಿಳಿಸಿದರು.

ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಲೀಗಲ್ ಕಂ ಪ್ರೊಬೇಷನ್ ಆಫೀಸರ್ ಶಿವಲೀಲಾ ವನ್ನೂರು ಅವರು ಮಾತನಾಡಿ, ಜಿಲ್ಲೆಯಲ್ಲಿ ಮಕ್ಕಳ ಮೇಲಿನ ಲೈಂಗಿಕ ಅಪರಾಧಗಳನ್ನು ತಡೆಗಟ್ಟಲು ಸರಕಾರವು ವಿವಿಧ ಕಾನೂನುಗಳನ್ನು ಜಾರಿಯಲ್ಲಿ ತಂದಿರುತ್ತದೆ. ಅವುಗಳಲ್ಲಿ ಲೈಂಗಿಕ ಅಪರಾಧಗಳಿಂದ ಮಕ್ಕಳ ಸಂರಕ್ಷಣಾ ಕಾಯ್ದೆ–2012 ತಿದ್ದುಪಡಿ–2019 ಪ್ರಮುಖವಾದದ್ದು. ಈ ಕಾಯ್ದೆಯನ್ವಯ 18 ವರ್ಷದೊಳಗಿನ ಮಕ್ಕಳ ಮೇಲಿನ ಬೇಧಕ ಲೈಂಗಿಕ ಹಲ್ಲೆಗೆ ಕನಿಷ್ಠ 20 ವರ್ಷಗಳಿಂದ ಅಜೀವ ಜೈಲು ಶಿಕ್ಷೆ ಮತ್ತು ದಂಡವನ್ನು ವಿಧಿಸಬಹುದಾಗಿದೆ. ಲೈಂಗಿಕ ಕಿರುಕುಳ ಅಂದರೆ, ಮಕ್ಕಳಿಗೆ ಶಾಬ್ದಿಕ, ಅಂಗಿಕ, ಭಾಷಿಕ ಹಾಗೂ ಲಿಖಿತವಾಗಿ ಅವರ ಘನತೆಗೆ ಧಕ್ಕೆ ಉಂಟುಮಾಡಬಹುದಾದ ಯಾವುದೇ ಈ ರೀತಿಯ ಕೃತ್ಯಗಳಿಗೆ 7 ವರ್ಷಗಳವರೆಗೆ ಜೈಲು ಶಿಕ್ಷೆ ಮತ್ತು ದಂಡವನ್ನು ವಿಧಿಸಬಹುದಾಗಿದೆ. ಈ ರೀತಿಯ ಕೃತ್ಯಗಳಿಗೆ ಸಹಾಯ, ಪ್ರೋತ್ಸಾಹ ಮತ್ತು ಪ್ರಯತ್ನಪಟ್ಟವರಿಗೂ ಅಷ್ಟೇ ಪ್ರಮಾಣದ ಶಿಕ್ಷೆಯನ್ನು ವಿಧಿಸಬಹುದಾಗಿದೆ.

ಆದ್ದರಿಂದ ಗ್ರಾಮ ಮಟ್ಟದಲ್ಲಿ ವಿವಿಧ ರೀತಿಯಲ್ಲಿ ಜಾಗೃತಿಯನ್ನು ಮೂಡಿಸಲು ಗ್ರಾಮ ಮಟ್ಟದ "ಮಕ್ಕಳ ರಕ್ಷಣಾ ಸಮಿತಿ"ಯಲ್ಲಿ ಚರ್ಚಿಸಿ, "ಮಕ್ಕಳ ಹಕ್ಕುಗಳು, ಕಾನೂನುಗಳ ಮತ್ತು ಮಕ್ಕಳ ಸುರಕ್ಷತೆ ಕುರಿತು" ಸಮುದಾಯಗಳಲ್ಲಿ ಜಾಗೃತಿಯನ್ನು ಮೂಡಿಸಿ, ತನ್ಮೂಲಕ ಮಕ್ಕಳ ಮೇಲಿನ ಲೈಂಗಿಕ ಹಲ್ಲೆ, ಬಾಲ್ಯವಿವಾಹಗಳನ್ನು ತಡೆದು ಬಾಲ್ಯವಿವಾಹ ಮುಕ್ತ ಜಿಲ್ಲೆಯನ್ನಾಗಿಸಲು ಸಹಕರಿಸುವಂತೆ ತಿಳಿಸಿದರು.

ಹಿಟ್ನಾಳ ಪ್ರಾಥಮಿಕ ಕೇಂದ್ರದ ಆಡಳಿತ ವೈದ್ಯಾಧಿಕಾರಿ ಡಾ. ಮಂಜುಳಾ ಶರ್ಮ ಅವರು ಮಾತನಾಡಿ, "ಮಕ್ಕಳ ಮೇಲಿನ ಲೈಗಿಂಕ ದೌರ್ಜನ್ಯ ತಡೆ ಕಾಯ್ದೆ–2012ನ್ನು ಸರ್ಕಾರವು ಜಾರಿಗೆಗೊಳಿಸಿದ್ದು, ಈ ಕಾಯ್ದೆಯ ಮುಖ್ಯ ಉದ್ದೇಶವೆಂದರೆ ಮಕ್ಕಳ ಮೇಲೆನ ದೌರ್ಜನ್ಯವನ್ನು ತಡೆಗಟ್ಟುವುದಾಗಿದೆ. ಈ ಕಾಯ್ದೆಯಡಿಯಲ್ಲಿ 18 ವರ್ಷದೊಳಗಿನ ಹೆಣ್ಣು ಅಥವಾ ಗಂಡು ಮಕ್ಕಳಿಗೆ ಸಂಜ್ಞೆ, ಶಾಬ್ದಿಕವಾಗಿ ಕಿರುಕುಳನ್ನು ನೀಡುವುದು ಸಹ ದೌರ್ಜನ್ಯವೆಂದು ಪರಿಗಣಿಸಲಾಗುತ್ತದೆ. ಈ ಕಾಯ್ದೆಯಡಿಯಲ್ಲಿ ಪ್ರಕರಣವು ದಾಖಲಾದಲ್ಲಿ ಅದು ವಿಚಾರಣಾ ಅರ್ಹ ಮತ್ತು ಜಾಮೀನುರಹಿತ ಪ್ರಕರಣ ಎಂದು ಪರಿಗಣಿಸಲಾಗುತ್ತದೆ. ಆದ್ದರಿಂದ ಎಲ್ಲರೂ ಮಕ್ಕಳ ಹಕ್ಕುಗಳನ್ನು ಗೌರವಿಸಿ ಎಂದರು.

ರಕ್ಷಣಾಧಿಕಾರಿ ರವಿ ಬಡಿಗೇರ ಅವರು ಮಾತನಾಡಿ, ನವಜಾತ ಶಿಶು ಮತ್ತು ಮಕ್ಕಳನ್ನು ಎಲ್ಲೆಂದರಲ್ಲಿ ಬಿಸಾಕಿ ಹೊಗುವುದು ಕಂಡುಬರುತ್ತಿದೆ. ಮಕ್ಕಳ ಮಾರಟ ಮಾಡುವುದು ಕಾನೂನು ಬಾಹಿರ ಅಪರಾವಾಗಿರುತ್ತದೆ. ಯಾರಿಗಾದರು ಮಕ್ಕಳು ಬೆಡವಾದಲ್ಲಿ ಸರಕಾರಕ್ಕೆ ನೀಡಬಹುದು. ಅತಹ ಮಕ್ಕಳ ಆರೈಕೆ ಮತ್ತು ಪೋಷಣೆ ಮಾಡಲಾಗುತದೆ. ಮಕ್ಕಳನ್ನು ಬಿಸಾಕಿ ಹೊದರೆ ಕಾನೂನು ಕ್ರಮಕೈಗೊಳಲಾಗುವುದು ಎಂದು ಹೇಳಿ, ದತ್ತು ಕಾರ್ಯಕ್ರಮ ಯೋಜನೆಗಳ ಕುರಿತು ಮಾತನಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಹಿಟ್ನಾಳ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಕೃಷ್ಣಮೂರ್ತಿ ಅವರು ಪ್ರಸ್ತಾವಿಕವಾಗಿ ಮಾತನಾಡಿದರು.

ಈ ಸಂದರ್ಭದಲ್ಲಿಕಾರ್ಮಿಕ ಇಲಾಖೆ ಸಿಬ್ಬಂದಿ ಸುರೇಶ ಯೋಗಿ, ಹಿಟ್ನಾಳ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಬಸವರಾಜ, ಅಂಗನವಾಡಿ ಮೇಲ್ವಿಚಾರಕಿ ಸುಮಂಗಲಾ ಸಜ್ಜನ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು. ರಮೇಶ ಹರಿಜನ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

# ವಿದ್ಯಾರ್ಥಿಗಳು ಶೈಕ್ಷಣಿಕ ರಾಯಭಾರಿಗಳು – ಆರ್.ಎಲ್. ಮಿರ್ಜಿ




**ಬೆಳಗಾವಿ ವಾರ್ತೆ ಮೂಡಲಗಿ:** ಒಂದು ಶಿಕ್ಷಣ ಸಂಸ್ಥೆ ಯಲ್ಲಿ ಜ್ಞಾನಾರ್ಜನೆ ಪಡೆದು ಉತ್ತೀರ್ಣ ರಾಗಿ ಅಲ್ಲಿಂದ ಬೀಳ್ಕೊಂಡು, ಉನ್ನತ ಶಿಕ್ಷಣಕ್ಕಾಗಿ ಇನ್ನೊಂದು ಶಿಕ್ಷಣ ಸಂಸ್ಥೆಗೆ ಪ್ರವೇಶ ಪಡೆದರೆ. ಆಗ ಆ ವಿದ್ಯಾರ್ಥಿಗಳು ಈ ಹಿಂದೆ ಕಲಿತ ಶಿಕ್ಷಣ ಸಂಸ್ಥೆಯ ಶೈಕ್ಷಣಿಕ ರಾಯಭಾರಿಗಳಾಗಿ ಹೊಸ ಶಿಕ್ಷಣ ಸಂಸ್ಥೆಯಲ್ಲಿ ತಮ್ಮ ಛಾಪು ಮೂಡಿಸುತ್ತಾರೆ ಎಂದು ಗೋಕಾಕ ಸರ್ಕಾರಿ ಪದವಿ ಪೂರ್ವ ಮಹಾವಿದ್ಯಾಲಯದ ಶಿಕ್ಷಕ ಆರ್.ಎಲ್. ಮಿರ್ಜಿ ಅಭಿಪ್ರಾಯಪಟ್ಟರು.

ಅವರು ಪಟ್ಟಣದ ಮೂಡಲಗಿ ಶಿಕ್ಷಣ ಸಂಸ್ಥೆಯ ಕಲಾ, ವಾಣಿಜ್ಯ ಹಾಗೂ ಬಿ.ಸಿ.ಎ. ಮಹಾವಿದ್ಯಾಲಯದ 2025–26ನೇ ಸಾಲಿನ ವಾರ್ಷಿಕ ಸ್ನೇಹ ಸಮ್ಮೇಳನದ ಮುಖ್ಯ ಅತಿಥಿಯಾಗಿ ಮಾತನಾಡುತ್ತಿದ್ದರು,

ವಿದ್ಯಾರ್ಥಿಗಳು ನಾವು ಗ್ರಾಮೀಣ ಪ್ರದೇಶದಿಂದ ಬಂದವರು, ಕನ್ನಡ ಮಾಧ್ಯಮದಿಂದ ಬಂದವರು, ನಾವು ಬಡವರು, ನಮ್ಮ ಕುಟುಂಬದಲ್ಲಿ ಈ ಹಿಂದೆ ಯಾರು ಕಲಿತಿಲ್ಲ, ನನ್ನಿಂದ ಏನು ಆಗುತ್ತದೆ ಎಂಬ ಕೀಳರಿಮೆಯನ್ನು ತೊರೆದು ಸತತಪ್ರಯತ್ನ, ಸದ್ವರ್ತನೆ, ನೈತಿಕತೆ, ಸ್ವಾವಲಂಬನೆ, ಸ್ವಾಭಿಮಾನ ಹಾಗೂ ದೇಶಾಭಿಮಾನಗಳನ್ನು ಬೆಳೆಸಿಕೊಂಡು ಮುಂದುವರಿದರೆ ಯಶಸ್ಸು ನಿಮ್ಮ ಜೊತೆಯಲ್ಲೇ ಇರುತ್ತದೆ ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಮೂಡಲಗಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ವೆಂಕಟೇಶ ಸೋನವಾಲ್ಕರ ಮಾತನಾಡಿ, ಈ ಶಿಕ್ಷಣ ಸಂಸ್ಥೆಯಲ್ಲಿ ಕಲಿತು ಉನ್ನತ ವ್ಯಾಸಂಗ ಮಾಡಿ, ಭವಿಷ್ಯದಲ್ಲಿ ಹೆಚ್ಚಿನ ಸಾಧನೆ ಮಾಡಿದರೆ, ಶಿಕ್ಷಣ ಸಂಸ್ಥೆಗೆ, ಕಲಿಸಿದ ಗುರುಗಳಿಗೆ ಹಾಗೂ ಪೋಷಕರಿಗೆ ಕೀರ್ತಿ ತಂದಂತಾಗುತ್ತದೆ. ಅದಕ್ಕಾಗಿ ಪ್ರತಿಯೊಬ್ಬ ವಿದ್ಯಾರ್ಥಿಯೂ ಸಾಧನೆಯ ಕನಸು ಕಾಣಬೇಕು ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯದ ಕಬಡ್ಡಿ ಆಟಗಾರ ಚಂದ್ರು ದಾಸನ್ನವರ ಹಾಗೂ ಸೈಕ್ಲಿಂಗ್ ತಂಡದ ಆಟಗಾರ್ತಿ ಪೂಜಾ ಮಠಪತಿ ಅವರನ್ನು ಶಾಲು ಹೊದಿಸಿ ಗೌರವಿಸಲಾಯಿತು.

2025–26ನೇ ಸಾಲಿನ ಆದರ್ಶ ವಿದ್ಯಾರ್ಥಿ ಪ್ರಶಸ್ತಿಯನ್ನು ಸುನೀಲ ಜಡಗನ್ನವರ, ಆದರ್ಶ ವಿದ್ಯಾರ್ಥಿನಿ ಪ್ರಶಸ್ತಿಯನ್ನು ಸುಶ್ಮೀತಾ ಪಾಟೀಲ, ಕ್ರೀಡಾ ವಿಭಾಗದ ವೀರಾಗ್ರ ಪ್ರಶಸ್ತಿಯನ್ನು ಸಿದ್ದು ಹುಣಶ್ಯಾಳ, ವೀರಾಗ್ರಣಿ ಪ್ರಶಸ್ತಿಯನ್ನು ಸಾವಿತ್ರಿ ಗುಡೆನ್ನವರ, ಗ್ರಂಥಾಲಯ ವಿಭಾಗದ ಉತ್ತಮ ಓದುಗ ಪ್ರಶಸ್ತಿಯನ್ನು ರಮೇಶ ಕೃಷ್ಣಪ್ಪ ಕುಲಿಗೊಡ ಹಾಗೂ ಉತ್ತಮ ಓದುಗಾರ್ತಿ ಪ್ರಶಸ್ತಿಯನ್ನು ಪಾರ್ವತಿ ದುರ್ಗಪ್ಪ ಹರಿಜನ ಪಡೆದರು.

ರೋವರ್ಸ್ ಸ್ಕೌಟ್ ವಿಭಾಗದಲ್ಲಿ ಉತ್ತಮ ರೋವರ್ಸ್ ಪ್ರಶಸ್ತಿಯನ್ನು ಪ್ರವೀಣ ಸೀತಾರಾಮ ವಡ್ಡರ ಮಹಾಂತೇಶ ಬೀರಪ್ಪ ಬೋರಗೌಡ ಹಾಗೂ ಲಕ್ಷ್ಮಣ ಸುರೇಶ ಭಮ್ಮವ್ವಗೋಳ ಅವರಿಗೆ ನೀಡಲಾಯಿತು.

ಕುಮಾರಿ ಸುಶ್ಮೀತಾ ಪಾಟೀಲ ಹಾಗೂ ಕುಮಾರ ರಮೇಶ ಕುಲಿಗೋಡ ತಮ್ಮ ಮೂರು ವರ್ಷದ ಪದವಿ ಶಿಕ್ಷಣದ ಅನುಭವವನ್ನು ಹಂಚಿಕೊಂಡರು.

ಸಮಾರಂಭದಲ್ಲಿ ಶಿಕ್ಷಣ ಸಂಸ್ಥೆಯ ನಿರ್ದೇಶಕರಾದ ಸಂದೀಪ ಸೋನವಾಲ್ಕರ, ಡಾ. ಎಸ್. ವ್ಹಿ. ಹೊಸೂರ, ಎಸ್.ಬಿ. ಖೋತ ಎ ಎಸ್ ಮಿಸಿ ನಾಯಿಕ ಎಮ್ ಎಸ್ ಕುಂದರಗಿ ಡಾ. ಪವನ ಕುಮಾರ ಕೆ., ಎಲ್.ಪಿ. ಹಿಡ್ಕಲ, ಡಾ. ಬಸವಂತ ಬರಗಾಲಿ, ಪಿ.ಬಿ. ಚೌಡಕಿ, , ಕೆ.ಪಿ. ಧೋಣಿ, ವ್ಹಿ ಆರ್ ದೇಶಪಾಂಡೆ, ಭಾರತಿ ತಳವಾರ, ಎಸ್.ಎಸ್. ಕುಲಿಗೂಡ, ಎಸ್. ಎಸ್. ಹಿರೇಮಠ, ಸುನಂದಾ ಅಂಗಡಿ, ಸಂತೋಷ ಮುಗಳಿ, ವೆಂಕಟೇಶ ಪಾಟೀಲ, ಪ್ರತಿಭಾ ಪಂಡ್ರೊಳಿ, ಶಿಲ್ಪಾ ಕಾಂಬಳೆ ಹಾಗೂ ಎನ್‌ಸಿ.ಭರಮನ್ನವರ ಉಪಸ್ಥಿತರಿದ್ದರು. ಅಶ್ವಿನಿ ನಾಯಿಕವಾಡಿ ಪ್ರಾರ್ಥಿಸಿದರು. ಆಡಳಿತಾಧಿಕಾರಿ ಡಾ. ಎಸ್.ಎಲ್. ಚಿತ್ರಗಾರ ಸ್ವಾಗತಿಸಿದರು. ಪ್ರೊ ಎ ಎಸ್. ಮಿಸಿ ನಾಯಿಕ ವರದಿ ವಾಚಿಸಿದರು. ಎಸ್ .ಕೆ. ಅಂಗಡಿ ಹಾಗೂ ಎಸ್.ಆರ್. ಮುಗಳಿ ನಿರೂಪಿಸಿದರು. ಪಾರಿತೋಷಕ ವಿತರಣೆಯನ್ನು ಎಲ್.ಪಿ. ಹಿಡ್ಕಲ ಎಸ್.ಕೆ. ಕೊತ್ತಲ, ಪಿ.ಬಿ. ಚೌಡಕಿ ಹಾಗೂ ಬಿ.ಎಸ್. ಕಂಬಾರ ನಿರ್ವಹಿಸಿದರು. .ಎಸ್. ಕುಂದರಗಿ ವಂದಿಸಿದರು.

# ಬೆಳಗಾವಿ ಜನರಿಗೆ ಕಾಮಾಖ್ಯಾ ಕಾಮಧೇನು ಆಗಲಿ: ಶ್ರೀಗಳು



**ಬೆಳಗಾವಿ ವಾರ್ತೆ ಬೆಳಗಾವಿ:** ವೈದ್ಯರು ಹಣದ ವ್ಯಾಮೋಹಕ್ಕೆ ಒಳಗಾಗದೆ ಬಡ ಜನರ ಆರೋಗ್ಯ ಸೇವೆ ಮಾಡಿದಾಗ ಮಾತ್ರ ಅವರ ಜೀವನ ಸಾರ್ಥಕವಾಗುತ್ತದೆ.ಬಡವರಿಗೆ ಕಡಿಮೆ ವೆಚ್ಚದಲ್ಲಿ ಗುಣಮಟ್ಟದ ಆರೋಗ್ಯ ಸೇವೆ ಸಿಗಬೇಕು ಎಂದು ರುದ್ರಾಕ್ಷಿಮಠದ ಗುರುಸಿದ್ಧ ಸ್ವಾಮೀಜಿ ಹೇಳಿದರು.

ಭಾನುವಾರ ಬೆಳಗಾವಿ ಸದಾಶಿವ ನಗರದಲ್ಲಿ ಕಾಮಾಖ್ಯಾ ಡೈಗ್ನೋಸ್ಟಿಕ್ ಮತ್ತು ಸಂಶೋಧನಾ ಪ್ರಯೋಗಾಲಯ ಉದ್ಘಾಟನೆ ಮಾಡಿ ಮಾತನಾಡಿದರು. ಬೆಳಗಾವಿಯಲ್ಲಿ ಗುಣಮಟ್ಟದ ಆರೋಗ್ಯ ಸೇವೆ ಮರಿಚಿಕೆಯಾಗಿದೆ. ಎಲ್ಲರೂ ನೆರೆಯ ಜಿಲ್ಲೆಗೆ ಹೋಗುತ್ತಿದ್ದಾರೆ. ಕಡಿಮೆ ವೆಚ್ಚದಲ್ಲಿ ರೋಗಿಗಳಿಗೆ ಚಿಕಿತ್ಸೆ ದೊರೆಯಬೇಕು ಎಂದರು.

ಸಮಾಜಕ್ಕೆ ಉಪಯೋಗ ಆಗುವ ಕೆಲಸ ಕಾಮಾಖ್ಯಾ ಪ್ರಯೋಗಾಲಯ ಕೈಕೊಂಡಿರುವ ಕಾರ್ಯ ಶ್ಲಾಘನೀಯ ಎಂದು ಹೇಳಿದರು.

ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾ ವೈದ್ಯಾಧಿಕಾರಿ ಡಾ.ಐ.ಪಿ.ಗಡಾದ ಮಾತನಾಡಿ ಕೆಎಲ್ ಈ ಒಳಗೆ ಹೋದರೆ ಜೇಬು ಖಾಲಿ ಆಗುತ್ತದೆ ಎಂದು ಜನ ಭಾವಿಸಿರುವ ಈ ದಿನಗಳಲ್ಲಿ ಒಂದೇ ಸೂರಿನಡಿ ಸಕಲ ಸೌಲಭ್ಯಗಳನ್ನು ಒದಗಿಸಲು ಈ ಪ್ರಯೋಗ ಇಟ್ಟಿರುವ ಹೆಜ್ಜೆ ಶ್ಲಾಘನೀಯ ಎಂದು ಹೇಳಿದರು.

ಡಿಸಿಪಿ ನಾರಾಯಣ ಭರಮನಿ ಅವರು ಮಾತನಾಡಿ ಕರೋನಾ ಕಾಲದ ನಂತರ ಕ್ವಾಲಿಟಿ ಟ್ರಸ್ಟ ಟೆಸ್ಟ್,ಈಕಾನಮಿ ಕ್ಲಾಸ್ ಟೆಸ್ಟ್,ಮತ್ತು ಮನೆಗೆ ಬಂದು ಸೇವೆ ಸಲ್ಲಿಸುತ್ತಿರುವದು ಬಹಳಷ್ಟು ಅನುಕೂಲಕರ ಸಂಗತಿ.

ಜಿಲ್ಲೆಯ ಜನರಿಗೆ ಹಾಗೂ ಗಡಿಭಾಗದಲ್ಲಿ ವಾಸಿಸಿರುವ ಜನರಿಗೆ ಉದ್ಯಮ ಎಂದು ತಿಳಿಯದೇ ಇದೊಂದು ಸೇವೆ ಎಂದು ತಿಳಿದು ಆರೋಗ್ಯ ಸೇವೆ ಸಲ್ಲಿಸಬೇಕು ಎಂದು ಕಿವಿಮಾತು ಹೇಳಿದರು.

ವಿಧಾನ ಪರಿಷತ್ ಮಾಜಿ ಸದಸ್ಯ ಮಹಾಂತೇಶ್ ಕವಟಗಿಮಠ ಅವರು ಪ್ರತಿಯೊಬ್ಬ ಮನುಷ್ಯನ ಜೀವ ಅತ್ಯಮೂಲ್ಯ. ಸಾಕಷ್ಟು ವೈದ್ಯಕೀಯ ಸವಾಲುಗಳನ್ನು ಎದುರಿಸುತ್ತಿರುವ ಈ ಸಂದರ್ಭದಲ್ಲಿ ನಿಖರವಾದ ತಪಾಸಣೆ ಮುಖ್ಯ.ಈ ನಿಟ್ಟಿನಲ್ಲಿ ಕಾಮಾಖ್ಯ ಸಂಸ್ಥೆ ಮಾನ್ಯತೆಯನ್ನು ಹೊಂದಿರುವ ಸಂಸ್ಥೆಯಾಗಿದ್ದು ಅತ್ಯಾಧುನಿಕ ಹಾಗೂ ಗುಣಮಟ್ಟದ ಸೇವೆ ಸಲ್ಲಿಸಲಿದೆ.ಕೆ ಎಲ್ ಇ ಆಸ್ಪತ್ರೆ ಕಾಮಾಖ್ಯ ಸಂಸ್ಥೆ ಗೆ ಸದಾ ಸಹಕಾರ ನೀಡಲಿದೆ ಎಂದು ತಿಳಿಸಿದರು ಸಂಸ್ಥೆಯ ನಿರ್ದೇಶಕ ಅನಿಲ ಪಾಟೀಲ ಎಲ್ಲರಿಗೂ ಸ್ವಾಗತ ಕೋರಿದರು .ಡಾ.ಪ್ರೀತಿ ಮೇದಾರ,ಡಾ.ಬಾಬುರಾವ ಗೋಗಲೆ,ಡಾ.ನಿಶಾಂತ ಜಂಬಗಿ ಅವರು ಸಂಸ್ಥೆಯ ಸೇವೆಗಳ ಬಗ್ಗೆ ಮಾತನಾಡಿದರು . ವೇದಿಕೆಯಲ್ಲಿ ಬಸವರಾಜ ನಾಗರಾಳೆ, ರವಿ ಸುತಾರ,ರಾಜು ನಾಶಿಪುಡಿ ಉಪಸ್ಥಿತರಿದ್ದರು. ಶುಭಾಂಗಿ ವಿಭೂತೆ ನೂತನ ಕಾರ್ಡ ಕುರಿತು ವಿವರಿಸಿ ವಂದನಾರ್ಪಣೆ ಸಲ್ಲಿಸಿದರು

# ಅಥಣಿಯಿಂದ ಪುಣೆಗೆ ಮತ್ತು ಕೊಲ್ಲಾಪುರಕ್ಕೆ ಹೊಸ ಬಸ್ ಸೇವೆ ಆರಂಭ: ಶಾಸಕ ಲಕ್ಷ್ಮಣ ಸವದಿ ಚಾಲನೆ

**ಬೆಳಗಾವಿ ವಾರ್ತೆ ಅಥಣಿ:** ತಾಲೂಕಿನ ಪ್ರಯಾಣಿಕರ ಬಹುದಿನಗಳ ಬೇಡಿಕೆಗೆ ಸ್ಪಂದಿಸಿ ಅಥಣಿಯಿಂದ ಪುಣೆ ಹಾಗೂ ಅಥಣಿಯಿಂದ ಕೊಲ್ಲಾಪುರ ಮಾರ್ಗವಾಗಿ ನೂತನ ಸಾರಿಗೆ ಬಸ್ ಸೇವೆಗೆ ಸೋಮವಾರ ಚಾಲನೆ ನೀಡಲಾಯಿತು ಮಾಜಿ ಉಪ ಮುಖ್ಯಮಂತ್ರಿ ಹಾಗೂ ಅಥಣಿ ಶಾಸಕ ಲಕ್ಷ್ಮಣ ಸವದಿ ಅವರು ಹಸಿರು ನಿಶಾನೆ ತೋರಿಸುವ ಮೂಲಕ ಸೇವೆಗೆ ವಿಧ್ಯುಕ್ತ ಚಾಲನೆ ನೀಡಿದರು.

ಈ ವೇಳೆ ಮಾತನಾಡಿದ ಶಾಸಕ ಲಕ್ಷ್ಮಣ ಸವದಿ ಅವರು ಉದ್ಯೋಗ ಶಿಕ್ಷಣ ಮತ್ತು ವೈದ್ಯಕೀಯ ಚಿಕಿತ್ಸೆಗಾಗಿ ಅಥಣಿ ಭಾಗದ ಜನರು ಪುಣೆ ಮತ್ತು ಕೊಲ್ಲಾಪುರಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಪ್ರಯಾಣಿಸುತ್ತಾರೆ ಸಾರ್ವಜನಿಕರ ದೀರ್ಘಕಾಲದ ಬೇಡಿಕೆಯನ್ನು ಪರಿಗಣಿಸಿ ಪ್ರಯಾಣಿಕರಿಗೆ ಸುಗಮ ಸಾರಿಗೆ ವ್ಯವಸ್ಥೆ ಕಲ್ಪಿಸಲು ಈ ಮಾರ್ಗಗಳನ್ನು ಆರಂಭಿಸಲಾಗಿದೆ ವಿದ್ಯಾರ್ಥಿಗಳು ಉದ್ಯೋಗಸ್ಥರು ಮತ್ತು ವ್ಯಾಪಾರಿಗಳಿಗೆ ಇದರಿಂದ ಹೆಚ್ಚಿನ ಅನುಕೂಲವಾಗಲಿದೆ ಎಂದ ಅವರು ತಾಲೂಕಿನ ಅಭಿವೃದ್ಧಿಗೆ ಸಾರಿಗೆ ಸಂಪರ್ಕ ಅತ್ಯಗತ್ಯವಾಗಿದ್ದು ಮುಂದಿನ ದಿನಗಳಲ್ಲಿ ಪ್ರಯಾಣಿಕರ ಬೇಡಿಕೆಗೆ ಅನುಗುಣವಾಗಿ ಅಥಣಿಯಿಂದ ಶಿರಸಿವರೆಗೆ ದಿನಾಲು ಬಸ್ ಸೇವೆ ಸೇರಿದಂತೆ ಇನ್ನಷ್ಟು ಸಾರಿಗೆ ಸೌಲಭ್ಯಗಳನ್ನು ಒದಗಿಸಲು ಪ್ರಯತ್ನಿಸಲಾಗುವುದು ಎಂದರು

ಈ ಸಂದರ್ಭದಲ್ಲಿ ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ವಿಭಾಗೀಯ ನಿಯಂತ್ರಣ




ಅಧಿಕಾರಿ ಮಹಾದೇವ ಮುಂಜಿ, ಎನ್.ಎಂ. ಕೇರಿ, ಬಿ.ಬಿ. ಜಗದಾಳ, ಸಿದ್ದಾರ್ಥ ಶಿಂಗೆ, ಶಾಮ ಪೂಜಾರಿ, ವಿನಾಯಕ ಬಾಗಡಿ, ಕಲ್ಲೇಶ ಮಡ್ಡಿ ಸೇರಿದಂತೆ ಸಾರಿಗೆ ಇಲಾಖೆಯ ಸಿಬ್ಬಂದಿ, ಸ್ಥಳೀಯ ಮುಖಂಡರು ಮತ್ತು ಸಾರ್ವಜನಿಕರು ಉಪಸ್ಥಿತರಿದ್ದರು.


### ಹೊಸ ಬಸ್ ಮಾರ್ಗಗಳು

ಅಥಣಿಯಿಂದ ಪುಣೆ ನೂತನ ನೇರ ಬಸ್ ಸೇವೆ ಆರಂಭ,

ಅಥಣಿಯಿಂದ ಕೊಲ್ಲಾಪುರ ಪ್ರಯಾಣಿಕರಿಗೆ ಅನುಕೂಲಕರ ಮಾರ್ಗ,

**ಮುಂದಿನ ಯೋಜನೆ:** ಅಥಣಿಯಿಂದ ಶಿರಸಿ ದಿನಾಲು ಬಸ್ ಸೇವೆ.

# ಧಾರವಾಡ ಪಾಲಿಕೆ ಹೋರಾಟ: 12 ಕೈ ಸದಸ್ಯರ ರಾಜೀನಾಮೆ




**ಬೆಳಗಾವಿ ವಾರ್ತೆ ಧಾರವಾಡ:** ಪ್ರತ್ಯೇಕ ಮಹಾನಗರ ಪಾಲಿಕೆ ಹೋರಾಟ 10ನೇ ದಿನಕ್ಕೆ ಕಾಲಿಟ್ಟಿದ್ದು, ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ರವಿವಾರ ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆಯ 12 ಕಾಂಗ್ರೆಸ್ ಸದಸ್ಯರು ಪಾಲಿಕೆ ಸದಸ್ಯತ್ವ ಹಾಗೂ ಪಕ್ಷದ ಪ್ರಾಥಮಿಕ ಸದಸ್ಯತ್ವಕ್ಕೆ ರಾಜೀನಾಮೆ ನೀಡಿ ಧುಮುಕಿದ್ದಾರೆ. ಇದರಿಂದಾಗಿ ಹೋರಾಟ ಮತ್ತಷ್ಟು ತೀವ್ರತೆ ಪಡೆದುಕೊಂಡಿದೆ.

ಬಿ.ಡಿ. ಹಿರೇಮಠ ಅವರನ್ನು ಹೊರತುಪಡಿಸಿ ಹೋರಾಟ ನಡೆಸುತ್ತಿರುವವರೆಲ್ಲರೂ ಕಾಂಗ್ರೆಸ್ ಪಕ್ಷದವರು ಎಂದು ಬಿಜೆಪಿ ಮುಖಂಡರು ಹೇಳಿಕೆ ನೀಡಿದ ಹಿನ್ನೆಲೆಯಲ್ಲಿ ಪಕ್ಷಾತೀತವಾಗಿ ಹೋರಾಟ ನಡೆಸಲಾಗುತ್ತಿದೆ ಎಂಬುದನ್ನು ನಿರೂಪಿಸಲು ಕಾಂಗ್ರೆಸ್‌ನ 12 ಪಾಲಿಕೆ ಸದಸ್ಯರು ರಾಜಿನಾಮೆ ಪತ್ರವನ್ನು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಿಗೆ ನೀಡಿದರು.

ಹೋರಾಟದ ಭಾಗವಾಗಿ ವಾರ್ಡ್ 7ರ ನಾಗರಿಕರು ಗಾಂಧಿಚೌಕದಿಂದ ಕಲಾಭವನದವರೆಗೆ ಚಕ್ಕಡಿಗಳೊಂದಿಗೆ ಮೆರವಣಿಗೆ ನಡೆಸಿದರು. ಮುರುಘಾಮಠದ ಶ್ರೀ ಮಲ್ಲಿಕಾರ್ಜುನ ಸ್ವಾಮೀಜಿ ಪ್ರತ್ಯೇಕ ಪಾಲಿಕೆ ಹೋರಾಟಕ್ಕೆ ಬೆಂಬಲ ನೀಡಿದರು.

# ಶಿಕ್ಷಕರಿಗೆ ಸಸಿ ನೀಡಿ ಪರಿಸರ ಜಾಗೃತಿ ಮೂಡಿಸಿದ ಹಳೆ ವಿದ್ಯಾರ್ಥಿಗಳು

## ದೇಶದ ಸಾಂಸ್ಕೃತಿಕ ಶ್ರೀಮಂತಿಕೆಯಲ್ಲಿ ಗುರು ಶಿಷ್ಯ ಪರಂಪರೆ ಒಂದಾಗಿದೆ ಪ್ರೊ. ಪಟಾಯಿತ

**ಬೆಳಗಾವಿ ವಾರ್ತೆ ಗೋಕಾಕ :** ನಮ್ಮ ದೇಶದ ಸಾಂಸ್ಕೃತಿಕ ಶ್ರೀಮಂತಿಕೆಯಲ್ಲಿ ಗುರು ಶಿಷ್ಯ ಪರಂಪರೆ ಒಂದು. ಅನುದಿನವು ಕಾಯಕ ಮಾಡುತ್ತಾ ನಮ್ಮ ಸುಂದರ ಬದುಕನ್ನು ರೂಪಿಸಿಕೊಳ್ಳಬೇಕು .ಗುರು ಶಿಷ್ಯರ ನಡುವೆ ಇರುವ ಸಂಬಂಧ ಭಾವನಾತ್ಮಕ ಸಂಬಂಧವಾಗಿದ್ದು ಜೊತೆಗೆ ಸ್ನೇಹಿತರಲ್ಲಿಯೂ ಅದೇ ಭಾವನಾತ್ಮಕ ಸಂಬಂಧವಿದೆ ಎಂದು ಗೋಕಾಕ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹಾಯಕ ಪ್ರಾಧ್ಯಾಪಕ ಲಕ್ಷ್ಮಣ ಭೀಮಪ್ಪ ಪಟಾಯಿತ ಅಭಿಪ್ರಾಯಪಟ್ಟರು ಅವರು ತಾಲೂಕಿನ ಶಿಂದಿಕುರಬೇಟ ಗ್ರಾಮದ ಶ್ರೀ ಸಿದ್ದರಾಮೇಶ್ವರ ಆದರ್ಶ ಕನ್ನಡ ಮಾಧ್ಯಮ ಹಿರಿಯ ಪ್ರಾಥಮಿಕ ಅನುದಾನಿತ ಶಾಲೆಯ ಸನ್ 1999–2000 ಸಾಲಿನ ವಿದ್ಯಾರ್ಥಿಗಳು ಹಮ್ಮಿಕೊಂಡಿದ್ದ ಗುರು ವಂದನಾ ಕಾರ್ಯಕ್ರಮ ಹಾಗೂ ಸ್ನೇಹಿತರ ಪುನರ್ಮಿಲನ ಸಮಾರಂಭದ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದರು. ಮನುಷ್ಯ ಸಮಾಜದಲ್ಲಿ ಏನಾದರೂ ಸಾಧನೆ ಮಾಡಬೇಕಾದರೆ ಉತ್ತಮ ಚಾರಿತ್ರ್ಯ ಮುಖ್ಯವಾಗಿದೆ ಎಂದರಲ್ಲದೇ ಚಾರಿತ್ರ್ಯವೇ ಜೀವನದ ಕಿರೀಟ ವಾಗಿದೆ. ಪ್ರಾಥಮಿಕ ಶಾಲೆಯಲ್ಲಿ ವಿದ್ಯೆ ಕಲಿಸಿದ ಗುರುಗಳನ್ನು ಒಂದೇ ವೇದಿಕೆಯಲ್ಲಿ ಸೇರಿಸಿ ಅವರಿಗೆ ಸತ್ಕಾರದ ಜೊತೆಗೆ ಸಸಿ ನೀಡಿ ಪರಿಸರ ಜಾಗೃತಿ ಮೂಡಿಸಿದ ಹಳೆ ವಿದ್ಯಾರ್ಥಿಗಳ ಕಾರ್ಯ ಶ್ಲಾಘನೀಯ ಎಂದರು. ಅಧ್ಯಕ್ಷತೆ ವಹಿಸಿದ್ದ ಪ್ರಧಾನ ಗುರು ಎಂ.ಆರ್.ಕಡಕೋಳ ಮಾತನಾಡಿ ನಮ್ಮ ಶಾಲೆಯಲ್ಲಿ ಕಲಿತ ವಿದ್ಯಾರ್ಥಿಗಳು ವಿವಿಧ ಕ್ಷೇತ್ರಗಳಲ್ಲಿ ಸೇವೆ ಮಾಡುತ್ತಾ ತಮ್ಮ ಉತ್ತಮ ಬದುಕು ಕಟ್ಟಿಕೊಂಡು ಜೀವನ ನಡೆಸುತ್ತಿರುವ ನಮಗೆ ತುಂಬಾ ಸಂತೋಷವಾಗಿದೆ ಎಂದರು. ರಾಜ್ಯ ಮಟ್ಟದ ಪ್ರಶಸ್ತಿ ಪುರಸ್ಕೃತ ಶಿಕ್ಷಕಿ ಎಸ್.ಎಸ್.ದೊಡಮನಿ ಮಾತನಾಡಿ ನಮ್ಮ ಶಾಲೆಯಲ್ಲಿ ಕಲಿತ ವಿದ್ಯಾರ್ಥಿಗಳಿಗೆ ನಾವು ಶಿಕ್ಷಣದ ಜೊತೆಗೆ ಸಂಸ್ಕಾರವನ್ನು ನೀಡಿದ್ದು ತಾವುಗಳು ಕೂಡ ತಮ್ಮ ಮಕ್ಕಳಿಗೆ ಉತ್ತಮ ಸಂಸ್ಕಾರವನ್ನು ನೀಡಿ ಅವರನ್ನು ಜೀವನದಲ್ಲಿ ಉಜ್ವಲ ಭವಿಷ್ಯ ಕಟ್ಟಿಕೊಳ್ಳಲು ಪ್ರೇರಣೆ ನೀಡಬೇಕೆಂದು ಕರೆ ನೀಡಿದರು. ವೇದಿಕೆ ಮೇಲೆ ಶಿಕ್ಷಕರಾದ ಎಸ್.ಆರ್.ತರಾಳ, ಎಸ್.ಎಲ್.ಅಂಬಿ, ಬಸವರಾಜ ಪೂಜೇರಿ, ಎಲ್.ಆರ್.ಭೋವಿ, ಟಿ.ಐ.ಕಟ್ಟಿಮನಿ, ಎಸ್.ಆರ್. ಅರಳಿಮಟ್ಟಿ, ಪಿ.ಎನ್. ಬಡಕುಂದ್ರಿ, ಆರ್.ಬಿ.ಕರೆಪ್ಪಗೋಳ, ವಿಠ್ಠಲ ಕರೋಶಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.ವಿದ್ಯಾರ್ಥಿಗಳು ತಮ್ಮ ಶಾಲೆಯ ದಿನಗಳನ್ನು ಸ್ಮರಿಸಿಕೊಂಡರು. ವಿದ್ಯೆ ಕಲಿಸಿದ ಶ್ರೀ ಸಿದ್ದರಾಮೇಶ್ವರ ಪ್ರಾಥಮಿಕ ಶಾಲೆಯ ಶಿಕ್ಷಕರನ್ನು ಸನ್ಮಾನಿಸಿ ಗೌರವಿಸಿದರು. ಸಂಗೀತಾ ಬಳಗಾರ ಸ್ವಾಗತಿಸಿದರು. ರಾಜೇಶ್ವರಿ ನಿಪ್ಪಾಣಿ ನಿರೂಪಿಸಿದರು. ನಾಗೇಶ್ ಬಂಬಲಾಡಿ ವಂದಿಸಿದರು.



ಗೋಕಾಕ: ತಾಲೂಕಿನ ಶಿಂದಿಕುರಬೇಟ ಗ್ರಾಮದ ಶ್ರೀ ಸಿದ್ದರಾಮೇಶ್ವರ ಶಾಲೆಯ ವಿದ್ಯಾರ್ಥಿಗಳ ಗುರುವಂದನಾ ಕಾರ್ಯಕ್ರಮದಲ್ಲಿ ಶಿಕ್ಷಕರನ್ನು ಸನ್ಮಾನಿಸುತ್ತಿರುವುದು.

# 'ಮುಸ್ಲಿಂ ಲೀಗ್' ಆಗಿ ಪರಿವರ್ತನೆಯಾದ ಕಾಂಗ್ರೆಸ್

**ಬೆಳಗಾವಿ ವಾರ್ತೆ ಹುಬ್ಬಳ್ಳಿ:** ಕಾಂಗ್ರೆಸ್ ಪಕ್ಷದ ಮುಸ್ಲಿಂ ತುಷ್ಟೀಕರಣ ನೀತಿ ಮಿತಿಮೀರಿದ್ದು, ಮಹಮ್ಮದ್ ಅಲಿ ಜಿನ್ನಾ ಸ್ಥಾಪನೆ ಮಾಡಿದ ಮುಸ್ಲಿಂ ಲೀಗ್‌ನ ಎಲ್ಲ ಅಂಶಗಳನ್ನು ಅಳವಡಿಸಿಕೊಂಡು ಮುಸ್ಲಿಂ ಲೀಗ್ ಆಗಿ ಆ ಪಕ್ಷ ಪರಿವರ್ತನೆಯಾಗಿದೆ ಎಂದು ಕೇಂದ್ರ ಆಹಾರ ಮತ್ತು ನಾಗರಿಕ ಪೂರೈಕೆ ಸಚಿವ ಪ್ರಲ್ಹಾದ್ ಜೋಶಿ ವಾಗ್ದಾಳಿ ನಡೆಸಿದರು.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಆಳಂದ, ಬೆಂಗಳೂರು, ಹುಬ್ಬಳ್ಳಿ ಸೇರಿದಂತೆ ಹಲವು ಕಡೆ ಗಲಭೆ ಮಾಡಿದ ಮತಾಂಧ ಮುಸ್ಲಿಂ ಗಲಭೆಕೋರರ ಮೇಲಿನ ಕ್ರಿಮಿನಲ್ ಪ್ರಕರಣ ವಾಪಸ್ ಪಡೆದಿರುವುದು ಇದಕ್ಕೆ ತಾಜಾ ಉದಾಹರಣೆಯಾಗಿದೆ. ಅಲ್ಲದೇ, ಮುಸ್ಲಿಂ ಅಲ್ಪಸಂಖ್ಯಾತರಿಗೆ ಹೆಚ್ಚು ಅನುದಾನ, ನಿವೇಶನ, ಹತ್ತು ಹಲವು ಯೋಜನೆ ಮೂಲಕ ಓಲೈಕೆಯನ್ನು ರಾಜ್ಯ ಕಾಂಗ್ರೆಸ್ ಸರ್ಕಾರ ಮಾಡಿದೆ. ಗಲಭೆಕೋರರ ವಿರುದ್ಧದ ಪ್ರಕರಣ ವಾಪಸ್ ಪಡೆದಿರುವ ನಿರ್ಧಾರವನ್ನು ರಾಜ್ಯ ಸರ್ಕಾರ ಮರು ಪರಿಶೀಲನೆ ಮಾಡಬೇಕು. ಇಲ್ಲದೇ ಇದ್ದರೆ,



ಕಾನೂನು ಹೋರಾಟ ಮಾಡುತ್ತೇವೆ ಎಂದು ಸಚಿವ ಜೋಶಿ ಎಚ್ಚರಿಕೆ ನೀಡಿದರು.

ಕಾಂಗ್ರೆಸ್ ಪಕ್ಷದಲ್ಲಿ ಹಿರಿಯರು, ಬುದ್ಧಿವಂತರು ಸಾಕಷ್ಟು ಜನರಿದ್ದಾರೆ. ಆದರೆ, ಅವರೆಲ್ಲರೂ ಕುರಿ ಮಂದೆಯಲ್ಲಿ ಸಿಕ್ಕ ಹುಲಿಗಳಂತಾಗಿದ್ದಾರೆ ಎಂದು ಸಚಿವ ಜೋಶಿ ಛೇಡಿಸಿದರು. ಕೇಂದ್ರ ಸರ್ಕಾರವು ಬಿಪಿಎಲ್ ಕಾರ್ಡ್‌ದಾರರಿಗೆ ಪ್ರತಿಯೊಬ್ಬರಿಗೆ 5 ಕೆಜಿ ಅಕ್ಕಿ ಕೊಡುತ್ತಿದೆ. ಆದರೆ, ಮುಖ್ಯಮಂತ್ರಿ ಸಿದ್ದರಾಮಯ್ಯ ಹತ್ತು ಕೆಜಿ ಅಕ್ಕಿ ಕೊಡುತ್ತಿದ್ದೇವೆ ಎಂದು ಹೇಳುತ್ತಿದ್ದಾರೆ. ಅನ್ನಭಾಗ್ಯ ಎಂದು ಹೇಳಿ ಕೇಂದ್ರ ಸರ್ಕಾರದ ಅಕ್ಕಿ ಕೊಡುವ ವಿಷಯ ಮರೆಮಾಚಲು ನಾಚಿಕೆ ಆಗುವುದಿಲ್ಲವೇ? ಎಂದು ಪ್ರಶ್ನಿಸಿದರು.

# ಬಾಂಗ್ಲಾ ನುಸುಳುಕೋರರ ಶಂಕೆ: ಹುಬ್ಬಳ್ಳಿಯಲ್ಲಿ ಹೈ ಅಲರ್ಟ್



**ಬೆಳಗಾವಿ ವಾರ್ತೆ ಹುಬ್ಬಳ್ಳಿ:** ಪಶ್ಚಿಮ ಬಂಗಾಳದಿಂದ ಗೋವಾ ರಾಜ್ಯಕ್ಕೆ ತೆರಳುತ್ತಿದ್ದ 250ಕ್ಕೂ ಹೆಚ್ಚು ಜನರನ್ನು ಬಾಂಗ್ಲಾ ನುಸುಳುಕೋರರು ಎಂಬ ಅನುಮಾನದ ಹಿನ್ನೆಲೆಯಲ್ಲಿ ಶನಿವಾರ ಗೋಕುಲ ರೋಡ್ ಹೊಸ ಬಸ್ ನಿಲ್ದಾಣದಲ್ಲಿ ತೀವ್ರ ತಪಾಸಣೆ ಮಾಡಲಾಯಿತು.

ಬೆಳಗ್ಗೆ 11.30ರ ವೇಳೆಗೆ ಹೊಸ ಬಸ್ ನಿಲ್ದಾಣದಲ್ಲಿ ಏಕಕಾಲಕ್ಕೆ ಪಶ್ಚಿಮ ಬಂಗಾಳದ 250ಕ್ಕೂ ಹೆಚ್ಚು ಜನ ಕಾಣಿಸಿಕೊಂಡಿದ್ದರು. ಇದರಿಂದ ಅನುಮಾನಗೊಂಡ ಹಿನ್ನೆಲೆಯಲ್ಲಿ ಅಕ್ರಮ ಬಾಂಗ್ಲಾ ವಾಸಿಗಳು ಆಗಮಿಸಿದ್ದಾರೆ ಎಂದು ಹಿಂದೂ ಸಂಘಟನೆಯವರು ಆರೋಪಿಸಿದ ಹಿನ್ನೆಲೆಯಲ್ಲಿ ಪೊಲೀಸ್ ಅಧಿಕಾರಿಗಳು ಅನ್ಯ ರಾಜ್ಯದ ಕಾರ್ಮಿಕರನ್ನು ಪರಿಶೀಲಿಸಿದರು.

ಪಶ್ಚಿಮ ಬಂಗಾಳದಿಂದ ಅಮರಾವತಿ ಹುಬ್ಬಳ್ಳಿ ರೈಲ್ವೆ ಮೂಲಕ ಹುಬ್ಬಳ್ಳಿಗೆ ಆಗಮಿಸಿದ್ದಾರೆ ಎನ್ನಲಾಗಿದ್ದು, ಪೊಲೀಸ್ ಅಧಿಕಾರಿಗಳು ಹೊಸ ಬಸ್ ನಿಲ್ದಾಣದ ಪೋಲಿಸ್ ಹೊರ ಠಾಣೆ ಹಾಗೂ ವಿಶ್ರಾಂತಿ ಗೃಹದಲ್ಲಿ ಸುಮಾರು 200 ಜನರ ದಾಖಲಾತಿಗಳನ್ನು ಪರಿಶೀಲಿಸಿದರು. ಪಶ್ಚಿಮ ಬಂಗಾಳ, ಒರಿಸ್ಸಾ, ಜಾರ್ಖಂಡ್ ಹಾಗೂ ಬಿಹಾರ ರಾಜ್ಯದ ಕೂಲಿ ಕಾರ್ಮಿಕರು ಗೋವಾ ರಾಜ್ಯ ಹಾಗೂ ಕರ್ನಾಟಕ ರಾಜ್ಯದ ಕೆಲವು ಜಿಲ್ಲೆಗಳಲ್ಲಿ ಕೂಲಿ ಕೆಲಸ ಮಾಡುತ್ತಿರುವವರು ಎಂದು ತಿಳಿದು ಬಂದಿದೆ.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI, KARNATAKA - 590001